ಸಂಪುಟ : 8 ಸಂಚಿಕೆ : 248 ಪುಟ : 4 ಬೆಲೆ : 3.00 ಗುರುವಾರ ನವ್ವಂಬರ್ 09, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 248 Pages : 4 Price : 3.00 Thursday November 09, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ನವೆಂಬರ್ 9ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ:** ವಾರ್ಡ್ ನಂ. 30, 34, 35 ವಡ್ಡರಗೇರಿ 46 ಪ್ಲಾಟ್, ಕುಂಚಿ ಕೊರವರ ಓಣಿ, ಚನ್ನಮ್ಮ ಸರ್ಕಲ್, ಬಸ್ ಡಿಪೋ ಹಿಂದಿನ ಭಾಗ, ಶಿವಾನಂದ ಗಾರ್ಡನ್,

ವಾರ್ಡ್ ನಂ. 29 ಡಂಬಳವರ ಲೈನ್, ಚಂದಾವರಿಯವರ ಲೈನ್, ರಾಜೀವಗಾಂಧಿನಗರ ಗುಂಪಿನ ಮನೆಗಳು, ಭಾಂಡಗೆ ಲೈನ್, ಪೊಲೀಸ್ ಸ್ಟೇಷನ್ ರೋಡ್, ಕಲಾಮಂದಿರ ರೋಡ್, ಮಸೂತಿ ಲೈನ್, ವಾರ್ಡ್ ನಂ. 28 ಪಂಚಾಕ್ಷರಿ ನಗರ 3ನೆ ಕ್ರಾಸ್, ರಾಜೀವ ಗಾಂಧಿನಗರ 4, 5, 2ನೇ ಕ್ರಾಸ್, ವಾರ್ಡ್ ನಂ. 20, 21, 22, 23 ಗಂಜಿಬಸವೇಶ್ವರ ಸರ್ಕಲ್, ದ್ಯಾಮಪ್ಪನ ಕಟ್ಟಿ, ಕುಂಬಾರ ಓಣಿ, ಜಂತ್ಲಿ ಅವರ ಹೊಸ ಲೈನ್, ಪಡಗದ ಭಾಗ1,2, ಸಿಂಧನೂರ ಲೈನ್, ಬೇವಿನ ಮರದಮ್ಮ ಎಸ್ ಟಿ ಡಿ,

ಖಾನ್ ತೋಟ್, ಕೊಟ್ಟೂರವರ ಲೈನ್, ಶರೀಫಜ್ಜನ ಕಟ್ಟಿ, ಗೌಳಿಯವರ ಲೈನ್, ಹುಲಿಗೆಮ್ಮ ದೇವಿ ಗುಡಿ ಲೈನ್ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 5,6,10 ಸಿಹಿ ನೀರಿನ ಬಾವಿ, ಕಲ್ಮನಿ ಅವರ ಲೈನ್, ಮುಳುಗುಂದವರ ಲೈನ್, ಮಾನೆದ ಅವರ ಲೈನ್, ಮಲ್ಲಿಕಾರ್ಜುನ ಗುಡಿ ಲೈನ್, ಕಬಾಡಿಯವರ ಲೈನ್, ಯರಗಟ್ಟಿಯವರ ಲೈನ್, ಭೋಗದೆಯವರ ಲೈನ್, ವಕ್ಕಲಗೇರಿ ಕಿಲ್ಲಾ ಓಣಿ, ಗಾರ್ಗಿ ಪೇಟೆ, ನದಾಫ್ ಗಲ್ಲಿ, ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಬ್ಬು ಇಳುವರಿ ವಾಸ್ತವತೆಯ ಪರಿಶೀಲನೆಗೆ ತಂಡಗಳ ರಚನೆ । ಸಭೆಯಲ್ಲಿ ಮಾಹಿತಿ ನೀಡಿದ ಜಿಲ್ಲಾಧಿಕಾರಿ

## ರೈತರಿಗೆ ಅನುಕೂಲವಾಗುವಂತೆ ಅಗತ್ಯ ಕ್ರಮ ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಕಬ್ಬು ಬೆಳೆದ ಪ್ರದೇಶಗಳಿಗೆ ಭೇಟಿ ನೀಡಿ ರೈತರೊಂದಿಗೆ ಚರ್ಚಿಸಲು ಹಾಗೂ ಕಬ್ಬಿನ ಇಳುವರಿಯ ಕುರಿತು ವಾಸ್ತವತೆಯ ಪರಿಶೀಲನೆ ನಡೆಸಲು ತಂಡವನ್ನು ರಚಿಸಲಾಗಿದ್ದು, ತಂಡದವರು ನಿಗದಿತ ಸಮಯದಲ್ಲಿಯೇ ಕಬ್ಬು ಬೆಳೆದ ಪ್ರದೇಶಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಈ ಕುರಿತು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಬ್ಬಿನ ಇಳುವರಿ ಪರಿಶೀಲನೆಯ ಸಂದರ್ಭದಲ್ಲಿ ಸಕ್ಕರೆ ಕಾರ್ಖಾನೆಯವರು ಹಾಜರಿರುವುದು ಕಡ್ಡಾಯವಾಗಿದೆ. ಕಬ್ಬು ಕಟಾವು ಪ್ರಕ್ರಿಯೆಯನ್ನು ಜ್ಯೇಷ್ಠತಾ ಆಧಾರದ ಮೇಲೆ ಜರುಗಿಸುವ ಕುರಿತು ಕ್ರಮ ಕೈಗೊಳ್ಳುವುದು. ಈ ಕುರಿತು ಸಕ್ಕರೆ ಕಾರ್ಖಾನೆಯವರು ಜ್ಯೇಷ್ಠತಾ ಪಟ್ಟಿಯನ್ನು ತಂಡದ ಮುಖ್ಯಸ್ಥರಿಗೆ ಸಲ್ಲಿಸಬೇಕು. ಕಬ್ಬಿನ ಕಟಾವು ಸಮಯದಲ್ಲಿ ಸ್ಥಳಕ್ಕೆ ಭೇಟಿ ನೀಡಿ ಗ್ಯಾಂಗ್‌ಮನ್‌ಗಳಿಂದ, ಕೂಲಿಕಾರರಿಂದ, ಸಾಗಾಣಿಕೆದಾರರಿಂದ ಯಾವುದೇ ತೊಂದರೆಗಳಾಗದಂತೆ ಅಗತ್ಯ ಸೂಚನೆ ನೀಡಬೇಕು. ಕಬ್ಬು ಬೆಳೆಗೆ ಗೊಣ್ಣೆ ರೋಗದ ಭೀತಿ ಇರುವುದರಿಂದ ತಜ್ಞರೊಂದಿಗೆ ಸಮಾಲೋಚಿಸಿ ಅಗತ್ಯ ವೈಜ್ಞಾನಿಕ ಸಲಹೆಗಳನ್ನು ನೀಡಬೇಕು. ಕಬ್ಬು ಬೆಳೆಯ ಕಟಾವು ಪ್ರಕ್ರಿಯೆ ಪ್ರಾರಂಭದಿಂದ ಮುಗಿಯುವವರೆಗೂ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸೂಚಿಸಿದರು.

ಕಬ್ಬು ಕಟಾವು ಪ್ರಕ್ರಿಯೆಯಲ್ಲಿ ನಿಗದಿತ ದರಕ್ಕಿಂತ ಹೆಚ್ಚಿನ ಹಣದ ಅಮಿಷವೊಡ್ಡಿ ಜ್ಯೇಷ್ಠತಾ ಪ್ರಕ್ರಿಯೆಯನ್ನು ಬದಲಿಸುವ ಸಂಭವನೀಯತೆಯನ್ನು ತಡೆಗಟ್ಟಬೇಕು ಹಾಗೂ ಕಟಾವು ಸಮಯದಲ್ಲಿ ರೈತರೊಂದಿಗೆ ಹಾಗೂ ಗ್ಯಾಂಗ್‌ಮನ್‌ಗಳೊಂದಿಗೆ ಸಂವಹನ (ಬಟಣಜಡಿಚಿಭಿಣ) ಮಾಡಿಕೊಂಡು ರೈತರಿಗೆ ಉಂಟಾಗಬಹುದಾದ ತೊಂದರೆಗಳನ್ನು ಹಾಗೂ ನಷ್ಟವನ್ನು ಪರಿಹರಿಸಲು ಕ್ರಮ ಕೈಗೊಳ್ಳಬೇಕೆಂದರು.



**ಕಬ್ಬು ಬೆಳೆಗಾರರ ಸಮಸ್ಯೆ ಪರಿಶೀಲನೆಗೆ ತಂಡಗಳ ರಚನೆ**

ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಪರಿಶೀಲಿಸಲು ಹಾಗೂ ವಾಸ್ತವತೆ ಅರಿಯಲು ಆಹಾರ ನಿರೀಕ್ಷಕರು, ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತ ಅಧಿಕಾರಿ, ಸಕ್ಕರೆ ಕಾರ್ಖಾನೆಯ ಅಧಿಕಾರಿಗಳನ್ನೊಳಗೊಂಡಂತೆ 4 ತಂಡಗಳನ್ನು ರಚಿಸಲಾಗಿದೆ. ಉಪವಿಭಾಗಾದಿಕಾರಿಗಳು, ಜಂಟಿ ಕೃಷಿ ನಿರ್ದೇಶಕರು, ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು, ಮುಂಡರಗಿ ತಹಸೀಲ್ದಾರರು ಒಂದೊಂದು ತಂಡಗಳಿಗೆ ಮುಖ್ಯಸ್ಥರಾಗಿರುತ್ತಾರೆ.

ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ಗಂಗಪ್ಪ ಅವರು ಮಾತನಾಡಿ, ಪ್ರಸಕ್ತ ಸಾಲಿನ ಸಕ್ಕರೆ ಹಂಗಾಮಿಗೆ ಕೇಂದ್ರ ಸರ್ಕಾರದಿಂದ ನ್ಯಾಯಯುತ ಮತ್ತು ಲಾಭದಾಯಕ (ಎಫ್‌ಆರ್‌ಪಿ) ದರವನ್ನು ನಿಗದಿಪಡಿಸಿದ್ದು, ಕಬ್ಬು ಅರೆಯುವ ಮುನ್ನ ರೈತರ ಸಮಸ್ಯೆಗಳ ಕುರಿತು ಚರ್ಚಿಸಲು ಹಾಗೂ ಎಫ್‌ಆರ್‌ಪಿ ದರ ಹೆಚ್ಚಿಸುವ ಹಾಗೂ ಇತರೆ ವಿಷಯಗಳ ಕುರಿತು ಸಕ್ಕರೆ ಕಾರ್ಖಾನೆಯ ಮಂಡಳಿಯವರ ಹಾಗೂ ಕಬ್ಬು ಬೆಳೆಗಾರರ ಸಭೆಯನ್ನು ಜರುಗಿಸಲಾಗಿದೆ ಎಂದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಡಾ. ವೆಂಕಟೇಶ ನಾಯ್ಕ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ಗಂಗಪ್ಪ, ಎಪಿಎಂಸಿಯ ಸಹಾಯಕ ನಿರ್ದೇಶಕ ಎಂ.ಆರ್. ನದಾಫ್, ವಿಜಯನಗರ ಶುಗರ್ಸ್ ವ್ಯವಸ್ಥಾಪಕ ನಿರ್ದೇಶಕರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಮಾಹಿತಿ

## ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತ ಖರೀದಿಗೆ ದರ ನಿಗದಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತ ಖರೀದಿಗೆ ದರ ನಿಗದಿಪಡಿಸಲಾಗಿದ್ದು, ನವೆಂಬರ್ 15ರಿಂದ ಡಿಸೆಂಬರ್ 31ರವರೆಗೆ ರೈತರ ನೋಂದಣಿಗೆ ಅವಕಾಶವಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದಿಂದ ನೇಮಿಸಲ್ಪಟ್ಟ ಸಂಗ್ರಹಣಾ ಏಜೆನ್ಸಿಗಳು ಭತ್ತ ಖರೀದಿ ಹಂತದಲ್ಲಿ ಕೇಂದ್ರ ಸರ್ಕಾರದಿಂದ ನಿಗದಿಪಡಿಸಿದ ಮಾನದಂಡಗಳನ್ವಯ ಎಫ್‌ಎಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ರೈತರಿಂದ ಭತ್ತವನ್ನು ಖರೀದಿಸಲು ತೆರೆಯಲಾಗಿರುವ ಪ್ರತಿ ಖರೀದಿ ಕೇಂದ್ರಕ್ಕೆ ಕೃಷಿ ಇಲಾಖೆಯ ವತಿಯಿಂದ ಗ್ರೇಡರ್‌ಗಳನ್ನು ನೇಮಿಸಬೇಕು. ಭತ್ತವನ್ನು ಪ್ರತಿ ರೈತರಿಂದ ಉತ್ಪಾದನೆಗೆ ಅನುಗುಣವಾಗಿ ಪ್ರತಿ ಎಕರೆಗೆ 25 ಕ್ವಿಂಟಾಲ್‌ನಂತೆ ಗರಿಷ್ಠ 40 ಕ್ವಿಂಟಲ್ ಮೀರದಂತೆ ಖರೀದಿಸಬೇಕು. ಸರ್ಕಾರವು ನಿಗದಿಪಡಿಸಿರುವ ಪ್ರಮಾಣವನ್ನು ಮೀರಿ ಹೆಚ್ಚುವರಿಯಾಗಿ ಭತ್ತವನ್ನು ಖರೀದಿಸುವಂತಿಲ್ಲ. ಈ ಕುರಿತು ರೈತರಿಗೆ ಜಾಗೃತಿ ಮೂಡಿಸಬೇಕೆಂದು ತಿಳಿಸಿದರು. ಆಹಾರ ಮತ್ತು ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ಗಂಗಪ್ಪ ಎಂ. ಮಾತನಾಡಿ 2023-2024ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ ಕೇಂದ್ರ ಸರ್ಕಾರವು ನಿಗದಿಪಡಿಸಿರುವ 2.5 ಲಕ್ಷ ಮೆಟ್ರಿಕ್ ಟನ್ ಭತ್ತವನ್ನು ಸಾಮಾನ್ಯ ಭತ್ತ -ಪ್ರತಿ ಕ್ವಿಂಟಾಲ್‌ಗೆ 2,183 ರೂ. ಹಾಗೂ ಗ್ರೇಡ್ ಎ ಭತ್ತ-ಪ್ರತಿ ಕ್ವಿಂಟಾಲ್ ಗೆ 2,203 ರೂ. ದರದಲ್ಲಿ ಖರೀದಿಸಲು ಆದೇಶಿಸಿದೆ.

ಸಭೆಯಲ್ಲಿ ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಎಪಿಎಂಸಿ ಸಹಾಯಕ ನಿರ್ದೇಶಕ ಎಂ.ಆರ್. ನದಾಫ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಟಾಸ್ಕ್ ಫೋರ್ಸ್ ಸಮಿತಿ ಸದಸ್ಯರು ಹಾಜರಿದ್ದರು.



ಮುಂಡರಗಿಯಲ್ಲಿ ಬೆಂಬಲ ಬೆಲೆ ಯೋಜನೆಯಡಿ ಭತ್ತದ ಖರೀದಿ ಕೇಂದ್ರ ತೆರೆಯಲಾಗುತ್ತಿದ್ದು, ಜಿಲ್ಲೆಗೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳವನ್ನು ಸಂಗ್ರಹಣಾ ಸಂಸ್ಥೆಯನ್ನಾಗಿ ನೇಮಿಸಿದೆ ಎಂದು ಗಂಗಪ್ಪ ಎಂ. ಸಭೆಗೆ ತಿಳಿಸಿದರು.

## ನಾಳೆ ಶ್ರೀ ಧನ್ವಂತರಿ ಜಯಂತಿ 8ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಆಯುಷ್ ಇಲಾಖೆ, ಬೆಂಗಳೂರು, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ , ಆಯುಷ್ ಇಲಾಖೆ, ಗದಗ ವತಿಯಿಂದ " ಶ್ರೀ ಧನ್ವಂತರಿ ಜಯಂತಿ" 8ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ-2023 ಯನ್ನು ನವೆಂಬರ್ 10 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ ಗುಂಡೂರಾವ್ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ, ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಆಯುಷ್ ಇಲಾಖೆ ಆಯುಕ್ತರಾದ ಶ್ರೀಮತಿ ಕೆ. ಲೀಲಾವತಿ ಆಗಮಿಸುವರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಮಲ್ಲಿಕಾರ್ಜುನ ಉಪ್ಪಿನ ಸ್ವಾಗತ ಕೋರಿದ್ದಾರೆ.



## ನ.13ರಂದು ನರಗುಂದದಲ್ಲಿ ಜಿಲ್ಲಾಧಿಕಾರಿಗಳ ಜನತಾ ದರ್ಶನ



■ ವಿಜಯಸಾಕ್ಷಿ ಸುದ್ದಿ, ಗದಗ


ಸರ್ಕಾರದ ಮಾರ್ಗದರ್ಶನದಂತೆ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ, ಸೂಕ್ತ ಪರಿಹಾರವನ್ನು ಒದಗಿಸುವ ನಿಟ್ಟಿನಲ್ಲಿ ನವೆಂಬರ್ 13 ರಂದು ಮಧ್ಯಾಹ್ನ 2ಗಂಟೆಯಿಂದ ಜಿಲ್ಲೆಯ ನರಗುಂದ ತಾಲೂಕಿನ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರ ನೇತೃತ್ವದಲ್ಲಿ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಸ್ವಚ್ಛ ದೀಪಾವಳಿ-ಶುಭ ದೀಪಾವಳಿ ಅಭಿಯಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯವು ಸ್ವಚ್ಛ ಭಾರತ್ ಮಿಷನ್ ನಗರ 2.0 ಯೋಜನೆಯಡಿ ಮುಳಗುಂದ ಪಟ್ಟಣ ಪಂಚಾಯತಿ ವ್ಯಾಪ್ತಿಯ ಸಾರ್ವಜನಿಕರು/ ವ್ಯಾಪಾರಸ್ಥರಿಗೆ ತಿಳಿಯಪಡಿಸುವುದೇನಂದರೆ, ನಗರ ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಹಾಗೂ ಪರಿಸರ ಸ್ನೇಹಿ ಪ್ಯಾಕೇಜಿಂಗ್ ಬಳಕೆಯನ್ನು ಉತ್ತೇಜಿಸಲು ಸ್ವಚ್ಛ ದೀಪಾವಳಿ ಶುಭ ದೀಪಾವಳಿ ಅಭಿಯಾನವನ್ನು ಹಮ್ಮಿಕೊಂಡಿದೆ.

ಏಕಬಳಕೆ ಪ್ಲಾಸ್ಟಿಕ್ ಅನ್ನು ನಿಷೇಧಿಸಿ ಪರಿಸರ ಸ್ನೇಹಿ ಪ್ಯಾಕೇಜಿಂಗ್ ಬಳಕೆಯನ್ನು ಉತ್ತೇಜಿಸಿ ಸ್ವಚ್ಛ ದೀಪಾವಳಿ ಶುಭ ದೀಪಾವಳಿ ಅಭಿಯಾನ ಅಭಿಯಾನವನ್ನು ಯಶಸ್ವಿಗೊಳಿಸಬೇಕಾಗಿದೆ. ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ರಾತ್ರಿ 8 ಗಂಟೆಯಿಂದ 10 ಗಂಟೆಯವರೆಗೆ ಹಸಿರು ಪಟಾಕಿಗಳನ್ನು ಮಾತ್ರ ಸ್ಫೋಟಿಸುವ ಅವಕಾಶ ನೀಡಿದೆ ಎಂದು ಮುಳಗುಂದ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




### 'ನಮ್ಮ ಸ್ಮಾರಕ ದರ್ಶನ ಹಾಗೂ ಸಂರಕ್ಷಣೆಗಾಗಿ ಪ್ರವಾಸ' ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ.ಪಾಟೀಲ

## ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ, ಪುನಶ್ಚೇತನಕ್ಕೆ ದತ್ತು ಕಾರ್ಯಕ್ರಮ ಅನುಷ್ಠಾನ




■ ವಿಜಯಸಾಕ್ಷಿ ಸುದ್ದಿ, ಯಾದಗಿರಿ

ರಾಜ್ಯದಲ್ಲಿರುವ ಐತಿಹಾಸಿಕ ಹಾಗೂ ಪಾರಂಪರಿಕ ಸ್ಮಾರಕಗಳು ಮತ್ತು ಪ್ರವಾಸಿ ತಾಣಗಳ ದರ್ಶನ ಹಾಗೂ ಸಂರಕ್ಷಣೆಗಾಗಿ ರಾಜ್ಯ ಸರ್ಕಾರವು ದತ್ತು ನೀಡುವಂತಹ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳ, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಖಾತೆ ಸಚಿವರಾದ ಎಚ್.ಕೆ .ಪಾಟೀಲ್ ಹೇಳಿದರು.

ಶಹಾಪುರ ತಾಲೂಕಿನ ಶಿರವಾಳ ಗ್ರಾಮದಲ್ಲಿನ ದೇವಾಲಯಗಳ ಸಮುಚ್ಚಯಕ್ಕೆ ಭೇಟಿ ನೀಡಿ, "ನಮ್ಮ ಸ್ಮಾರಕ ದರ್ಶನ ಹಾಗೂ ಸಂರಕ್ಷಣೆಗಾಗಿ ಪ್ರವಾಸ" ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಐತಿಹಾಸಿಕ ಹಾಗೂ ಪಾರಂಪರಿಕ ಮತ್ತು ಸಾಂಸ್ಕೃತಿಕ ಕುರುಹುಗಳು ರಾಜ್ಯಾದ್ಯಂತ ಇದ್ದು, ಇಂತಹ ಸುಮಾರು ಒಂದು ಸಾವಿರ ಸ್ಮಾರಕಗಳನ್ನು ಗುರುತಿಸಲಾಗಿದ್ದು, ಮುಂದಿನ ಪೀಳಿಗೆ ಹಾಗೂ ಜನಾಂಗಕ್ಕೆ ಪರಿಚಯಿಸುವ ದಿಶೆಯಲ್ಲಿ ಸ್ಮಾರಕಗಳನ್ನು ದತ್ತು ನೀಡಿ ಅವುಗಳ ಪುನಶ್ಚೇತನ ಮತ್ತು ಸಂರಕ್ಷಣೆಗೆ ವಿಶೇಷ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಅದರ ಅಂಗವಾಗಿ ವಿವಿಧ ಸಂಘ ಸಂಸ್ಥೆಗಳು, ಉಳ್ಳವರು , ದಾನಿಗಳು ಸೇರಿದಂತೆ ಹೃದಯ ವೈಶಾಲ್ಯತೆ ಇರುವವರಿಂದ ಇಂತಹ ಸ್ಮಾರಕಗಳ ಸಂರಕ್ಷಣೆ ಮತ್ತು ಪುನಶ್ಚೇತನಕ್ಕೆ ದತ್ತು ನೀಡಿ ಸಂರಕ್ಷಿಸಲು ಗಮನ ನೀಡಲಾಗುತ್ತಿದೆ ಎಂದು ಅವರು ಹೇಳಿದರು.

ಸರಕಾರದ ಜೊತೆಗೆ ಆಯಾ ಐತಿಹಾಸಿಕ ತಾಣಗಳನ್ನು ಮತ್ತು ಸ್ಮಾರಕಗಳನ್ನು ಹೊಂದಿರುವಂತಹ ಗ್ರಾಮಗಳ ಗ್ರಾಮಸ್ಥರು ಕೂಡ ಕೈಜೋಡಿಸುವ ಕಾರ್ಯ ಮಾಡಬೇಕು. ಹಿರಿಯರು ನೀಡಿದ ಕೊಡುಗೆಗಳು ಇವಾಗಿದ್ದು, ನಾವೆಲ್ಲರೂ ವಾರಸುದಾರರಾಗಿ ಇಂತಹ ಐತಿಹಾಸಿಕ ಮತ್ತು ಪಾರಂಪರಿಕ ತಾಣಗಳ ಸಂರಕ್ಷಣೆ ಮತ್ತು ಪುನಶ್ಚೇತನಕ್ಕೆ ಗಮನ ನೀಡುವ ಅವಶ್ಯಕತೆ ಇದೆ ಇಂತಹ ಸ್ಮಾರಕಗಳ ಬಗ್ಗೆ ಗೌರವ ಅಭಿಮಾನ ವನ್ನು ಹೊಂದಬೇಕು. ವಿಶೇಷವಾಗಿ ಈ ಸ್ಮಾರಕಗಳ ವ್ಯಾಪ್ತಿಯಲ್ಲಿ ರಸ್ತೆಗಳ ದುರಸ್ತಿ ಸೇರಿದಂತೆ ▸▸ 3ನೇ ಪುಟಕ್ಕೆ

ಶಹಾಪುರ ತಾಲೂಕಿನಲ್ಲಿ ವಿಶೇಷವಾಗಿ ಶಿರವಾಳದಲ್ಲಿ ಸುಮಾರು 360 ಸ್ಮಾರಕಗಳು, ಸಾವಿರಾರು ಲಿಂಗಗಳು, ಗುಡಿ-ಗುಂಡಾರಗಳು ಇರುವ ಬಗ್ಗೆ ತಿಳಿದು ಬಂದಿದೆ. ದಕ್ಷಿಣದ ಕಾಶಿ ಎಂದೇ ಪ್ರಖ್ಯಾತಿ ಹೊಂದಿರುವ ಇಲ್ಲಿನ ಗುಡಿ ದೇವಸ್ಥಾನಗಳು ಮತ್ತು ಇತರೆ ಐತಿಹಾಸಿಕ ಕುರುಹುಗಳನ್ನು ಸಂರಕ್ಷಿಸುವ ಜೊತೆಗೆ ಪುನಶ್ಚೇತನ ಮಾಡುವ ಅಗತ್ಯವಿದೆ. ಈ ದಿಶೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಜಿಲ್ಲಾಡಳಿತದಿಂದಲೂ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದ್ದು, ಗ್ರಾಮಸ್ಥರು ಸರ್ಕಾರದೊಂದಿಗೆ ಕೈಜೋಡಿಸಬೇಕು.

**-ಎಚ್.ಕೆ.ಪಾಟೀಲ,** ಕಾನೂನು ಹಾಗೂ ಪ್ರವಾಸೋದ್ಯಮ ಖಾತೆ ಸಚಿವರು

ಇದೇ ಸಂದರ್ಭದಲ್ಲಿ ಶಹಾಪುರ ಮಹಾದ್ವಾರ ಕೊಳ್ಳುರು ಅಗಸಿ, ದಿಗ್ಗಿ ಅಗಸಿ ಹಾಗೂ ವಿಶ್ವ ಪ್ರಸಿದ್ಧ ತಾಣ ಬುದ್ಧ ಮಲಗಿದ ಸ್ಥಳ, ಹಾಗೂ ಬುದ್ಧ ವಿಹಾರಕ್ಕೆ ಭೇಟಿ ನೀಡಿ ವೀಕ್ಷಣೆ ಮಾಡಿ ಸಾರ್ವಜನಿಕ ಅಹವಾಲುಗಳನ್ನು ಸಚಿವರು ಸ್ವೀಕರಿಸಿದರು.



## ಪ್ಯಾಂಟ್ ಜಿಪ್‌ಲೈನ್‌ನಲ್ಲಿ ಚಿನ್ನ ಸಾಗಿಸುತ್ತಿದ್ದ ಪ್ರಯಾಣಿಕ!

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಪ್ಯಾಂಟ್ ಜಿಪ್ ಲೈನ್‌ನಲ್ಲಿ ಚಿನ್ನ ಕಳ್ಳಸಾಗಣೆ ಮಾಡುತ್ತಿದ್ದ ಪ್ರಯಾಣಿಕನನ್ನು ಏರ್ ಕಸ್ಟಮ್ಸ್ ಅಧಿಕಾರಿಗಳು ಬೆಂಗಳೂರು ಏರ್ ಪೋರ್ಟ್‌ನಲ್ಲಿ ವಶಕ್ಕೆ ಪಡೆದಿದ್ದಾರೆ.

ಶಾರ್ಜಾದಿಂದ ಬಂದಿದ್ದ ಪ್ರಯಾಣಿಕ ಪೇಸ್ಟ್ ರೂಪದಲ್ಲಿ ಚಿನ್ನ ಕಳ್ಳಸಾಗಣೆ ಮಾಡುತ್ತಿದ್ದ. ಈತನನ್ನು ಏರ್‌ಪೋರ್ಟ್‌ನಲ್ಲಿ ಏರ್ ಕಸ್ಟಮ್ಸ್ ಅಧಿಕಾರಿಗಳು ಪರಿಶೀಲನೆ ನಡೆಸಿದಾಗ ಪ್ಯಾಂಟ್ ಜಿಪ್‌ನಲ್ಲಿ ಚಿನ್ನ ಕಳ್ಳಸಾಗಣೆ ಮಾಡುತ್ತಿರುವ ವಿಚಾರ ಪತ್ತೆಯಾಗಿದೆ.

ಚಿನ್ನದೊಂದಿಗೆ ಪ್ರಯಾಣಿಕ ಸಿಗರೇಟ್ ಸ್ಟಿಕ್ ಹಾಗೂ ಸೌಂದರ್ಯವರ್ಧಕ ಪಾಕೆಟ್ ಸಾಗಾಟ ಮಾಡುತ್ತಿದ್ದ. 3,300 ಸಿಗರೇಟ್ ಸ್ಟಿಕ್ ಮತ್ತು 324 ಸೌಂದರ್ಯವರ್ಧಕ ಪಾಕೇಟ್‌ಗಳನ್ನೂ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ ಸುಮಾರು 18.57 ಲಕ್ಷ ರೂ. ಮೌಲ್ಯದ 284 ಗ್ರಾಂ ಚಿನ್ನವನ್ನು ಅಧಿಕಾರಿಗಳು ವಶಪಡಿಸಿಕೊಂಡಿದ್ದು, ಪ್ರಯಾಣಿಕನನ್ನು ವಶಕ್ಕೆ ಪಡೆದ ಅಧಿಕಾರಿಗಳು ವಿಚಾರಣೆ ನಡೆಸುತ್ತಿದ್ದಾರೆ.

## ಮುರುಘಾಶ್ರೀಗಳಿಗೆ ಜಾಮೀನು ಮಂಜೂರು

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**



ಕಳೆದ 14 ತಿಂಗಳಿಂದ ಜೈಲಿನಲ್ಲಿದ್ದ ಚಿತ್ರದುರ್ಗ ಮುರುಘಾ ಮಠದ ಡಾ. ಶಿವಮೂರ್ತಿ ಶರಣ ಸ್ವಾಮೀಜಿಗೆ ಹೈಕೋರ್ಟ್‌ನಿಂದ ಜಾಮೀನು ಮಂಜೂರು ಮಾಡಲಾಗಿದ್ದು, ಚಿತ್ರದುರ್ಗಕ್ಕೆ ಹೋಗದಂತೆ ಷರತ್ತು ಹಾಕಲಾಗಿದೆ.

ಚಿತ್ರದುರ್ಗ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಪೀಠಾಧ್ಯಕ್ಷ ಶ್ರೀ ಶಿವಮೂರ್ತಿ ಮುರುಘ ಶರಣರ ಮೇಲೆ ಅತ್ಯಾಚಾರ ಪ್ರಕರಣ ದಾಖಲಾಗಿತ್ತು. ಈ ಬಗ್ಗೆ ವಿಚಾರಣೆ ನಡೆಸಿದ ನ್ಯಾಯಾಲಯ ಜೈಲು ಶಿಕ್ಷೆಯನ್ನು ವಿಧಿಸಿತ್ತು. ಆದರೆ, ಈವರೆಗೆ ಒಟ್ಟು 14 ತಿಂಗಳ ಕಾಲ ಜೈಲು ಶಿಕ್ಷೆ ಅನುಭವಿಸಿದ ಮುರುಘಾ ಸ್ವಾಮೀಜಿ ಈಗಾಗಲೇ ಎರಡು ಬಾರಿ ಜಾಮೀನು ಮಂಜೂರಾತಿಗೆ ಹೈಕೋರ್ಟ್‌ಗೆ ಮನವಿ ಅರ್ಜಿ ಸಲ್ಲಿಕೆ ಮಾಡಿದ್ದರು. ವಿಚಾರಣೆಯನ್ನು ಮುಂದೂಡಿಕೆ ಮಾಡುತ್ತಾ ಬಂದಿದ್ದ ನ್ಯಾಯಾಲಯ ಒಂದು ಪ್ರಕರಣದಲ್ಲಿ ಮಾತ್ರ ಜಾಮೀನು ಮಂಜೂರು ಮಾಡಿದೆ. ಒಂದು ಮಠದ ವಸತಿ ನಿಲಯದ ವಿದ್ಯಾರ್ಥಿನಿಯರ ಮೇಲಿನ ಅತ್ಯಾಚಾರದ ಪೋಕ್ಸೋ ಪ್ರಕರಣ ಮತ್ತು ಅಟ್ರಾಸಿಟಿ ಕೇಸ್‌ಗೆ ಈಗ ಜಾಮೀನು ಮಂಜೂರು ಮಾಡಿದೆ. ಆದರೆ, ಮತ್ತೊಂದು ಪ್ರಕರಣದಲ್ಲಿ ಜಾಮೀನು ಮಂಜೂರು ಆಗಿಲ್ಲ. ಆದ್ದರಿಂದ ಮುರುಘಾ ಸ್ವಾಮೀಜಿಗೆ ಜಾಮೀನು ಮಂಜೂರು ಆದರೂ ಜೈಲಿನಿಂದ ಬಿಡುಗಡೆಯಾಗುವ ಭಾಗ್ಯವಿಲ್ಲ. ಒಟ್ಟು 7 ಷರತ್ತುಗಳನ್ನು ವಿಧಿಸಿರುವ ನ್ಯಾಯಾಲಯ, ಜೈಲು ಬದಲು ಹೊರಗಿರಲು ಮಾತ್ರ ಅವಕಾಶ ನೀಡಿದೆ.



ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಪಕ್ಷದ ಟಿಕೆಟ್ ಆಕಾಂಕ್ಷಿಯಾದ ಡಾ. ಶೇಖರ ಸಜ್ಜನರ ರೋಣದಲ್ಲಿ ಬಿಜೆಪಿ ನಾಯಕರಾದ ರಾಜಣ್ಣ ಹೂಲಿ, ಅಶೋಕ ನವಲಗುಂದ, ಅನಿಲ ಪಲ್ಲೇದ, ಶಿವಾನಂದ, ಮಂಜು ಕೊಪ್ಪರ, ರಂಗಣ್ಣವರ ವಕೀಲರನ್ನು ಭೇಟಿ ಮಾಡಿ ಬೆಂಬಲ ಯಾಚಿಸಿದರು. ಕೊತಬಾಳ, ಮುಗಳಿ, ಕುರಟ್ಟಿ ಗ್ರಾಮಗಳಲ್ಲಿ ಸಂಗಪ್ಪ, ವಸಂತ, ಉಪ್ಪಾರ ಭೇಟಿಯಾಗಿ ಪ್ರದಾನಿ ನರೇಂದ್ರ ಮೋದಿಯವರ ಕಳೆದ 10 ವರ್ಷಗಳ ಕಾರ್ಯಕ್ರಮಗಳ ಬಗ್ಗೆ ಮಾತನಾಡಿ ಬೆಂಬಲ ಯಾಚಿಸಿದರು.



ಹರಪನಹಳ್ಳಿ ತಾಲೂಕಿನ ಅರಸೀಕೆರೆ ಹೋಬಳಿಯ ಉಚ್ಚಂಗಿದುರ್ಗ ಗ್ರಾ.ಪಂ ಸಭಾಂಗಣದಲ್ಲಿ ಜಗಳೂರು ಶಾಸಕ ಬಿ.ದೇವೇಂದ್ರಪ್ಪ ಅಧಿಕಾರಿಗಳ ಸಭೆ ನಡೆಸಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು. ಈ ವೇಳೆ ತಾ.ಪಂ ಕಾರ್ಯ ನಿರ್ವಹಣಾಧಿಕಾರಿ ಕೆ.ಆರ್. ಪ್ರಕಾಶ್, ಎಇಇ ಪ್ರಕಾಶ್ ಗೌಡ ಪಾಟೀಲ್, ಕುಡಿಯುವ ನೀರು ಸರಬರಾಜು ಎಂಜಿನಿಯರ್ ಕಿರಣ್, ಕ್ಷೇತ್ರ ಶಿಕ್ಷಣಾಧಿಕಾರಿ ಯು.ಬಸವರಾಜಪ್ಪ, ಸಿಡಿಪಿಒ ಹರೀಶ್, ಅಭಿವೃಜಜಿಉ ಅಧಿಕಾರಿ ಪರಮೇಶ್ವರಪ್ಪ, ಗ್ರಾ.ಪಂ ಅಧ್ಯಕ್ಷೆ ಶಿಲ್ಪಾ ಉಮೇಶ್ ನಾಯ್ಕ್ ಸೇರಿದಂತೆ ಆನೇಕರು ಹಾಜರಿದ್ದರು.

### ಕೀಟದ ಕಿರಿಕಿರಿಗೆ ರೈತನ ಆವಿಷ್ಕಾರಕ್ಕೆ ಮನ್ನಣೆ | ಕೀಟನಾಶಕಕ್ಕೆ ಪರ್ಯಾಯ ಸೋಲಾರ್ ಟ್ರ್ಯಾಪ್

# ರೈತನೇ ಆವಿಷ್ಕರಿಸಿದ ಸಾಧನವೀಗ 'ರೈತಮಿತ್ರ'



ಅಂದೆಲ್ಲ ಕೃಷಿ ಆಧಾರಿತ ಕುಟುಂಬವೆಂದರೆ ಹಾಗೇ ಇತ್ತು. ಮನೆ ತುಂಬ ಮಕ್ಕಳು. ಅದೃಷ್ಟ ಇದ್ದವರಷ್ಟೇ ಉನ್ನತ ಶಿಕ್ಷಣದವರೆಗೆ ದಾರಿ ಕಾಣುತ್ತಿದ್ದರು. ಉಳಿದವರಿಗೆ ಕಾಲೇಜು ಮೆಟ್ಟಿಲು ಹತ್ತುವುದೇ ಕನಸಾಗಿತ್ತು. ಹಾಗೂ ಹೀಗೂ ಹೈಸ್ಕೂಲು ಶಿಕ್ಷಣ ಮುಗಿಯುತ್ತಿದ್ದಂತೆಯೇ ಮನೆಗೆ ಆಧಾರವಾಗಿದ್ದ ಕೃಷಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಸಮಯ ಕಾಯುತ್ತಲೇ ಇತ್ತು. ದಾವಣಗೆರೆ ಜಿಲ್ಲೆಯ ಜಿಗಳಿ ಎಂಬ ಸಣ್ಣ ಗ್ರಾಮದ ಈ ಹುಡುಗನ ಪರಿಸ್ಥಿತಿಯೂ ಹಾಗೆಯೇ ಇತ್ತೆನ್ನಿ. ನಿಜವಾಗಿ ಅವರ ಕುಟುಂಬದಲ್ಲಿ 10ನೇ ತರಗತಿಯಲ್ಲಿ ಓದಿದ ಮೊದಲಿಗರೂ ಹೌದು!

ಮುಂದೆ ಓದಬೇಕೆಂಬ ಆಸೆಯಿದ್ದರೂ ಪರಿಸ್ಥಿತಿ ಅವಕಾಶ ನೀಡಲಿಲ್ಲ. ಅವರು ತಮ್ಮ 5 ಎಕರೆ ಜಮೀನಿನಲ್ಲಿ ಉಳಿದ ಸದಸ್ಯರಂತೆಯೇ ಕೆಲಸಕ್ಕೆ ಹೆಗಲು ನೀಡಬೇಕಾಯ್ತು. ಅಲ್ಲಿಂದ ಪ್ರಾರಂಭವಾದ ಕೃಷಿ ಕೈಂಕರ್ಯ, ಆ ಹುಡುಗನಿಗೆ ಈಗ 50ರ ಹರೆಯದವರೆಗೂ ಮುಂದುವರೆದಿದೆ. ಅವರ ಹೆಸರು, ಕರಿಬಸಪ್ಪ ಎಂ.ಜಿ. ಅವರೀಗ ಕೇವಲ ಕೃಷಿಕರಷ್ಟೇ ಅಲ್ಲ, 'ಎಂಜಿಕೆ ಸೋಲಾರ್ ಟ್ರ್ಯಾಪ್'ನ ಸಂಶೋಧಕರೂ ಹೌದು. ತನ್ಮೂಲಕ, ಸಾಧಾರಣ ರೈತನಾಗಿದ್ದುಕೊಂಡು, ತನ್ನ ಅಗತ್ಯತೆಗಾಗಿ ಅನ್ವೇಷಿಸಿದ ಕೃಷಿ ಪೂರಕ ಯಂತ್ರದಿಂದ ಹಲವು ರೈತರ ಪಾಲಿಗೂ ಪರಿಹಾರವೊದಗಿಸಿದ್ದಾರೆ.

ಸಾಂಪ್ರದಾಯಿಕ ಕೃಷಿಯ ಹೊರತಾಗಿ ಬೇರೇನೋ ಮಾಡಬೇಕೆಂಬ ತುಡಿತ ಅವರಲ್ಲಿತ್ತು. 2012ರಲ್ಲಿ ದಾಳಿಂಬೆ ಬೆಳೆಯಲು ಮುಂದಾದರು. ಮುಂದಿನ 2 ವರ್ಷಗಳ ನಂತರ ದಾಳಿಂಬೆ ಬೆಳೆಗೆ ಕೀಟಬಾಧೆ ಪ್ರಾರಂಭವಾಗಿ ಕಾಡತೊಡಗಿತು. 5 ಎಕರೆ ಹೊಲದಲ್ಲಿ ಕೀಟನಿಯಂತ್ರಣಕ್ಕಾಗಿ ಸುಮಾರು 4.5 ಲಕ್ಷ ರೂ.ಗಳ ಕೀಟನಾಶಕ ಪ್ರಯೋಗಿಸಬೇಕಾಯ್ತು. ಅದರ ನಂತರವೂ ಕೀಟಬಾಧೆ ಹತೋಟಿಗೆ ಬಾರದಿದ್ದಾಗ, ಕರಿಬಸಪ್ಪರ ತಲೆಯಲ್ಲಿ ಬೇರೇನೋ ಯೋಚನೆ ಸುಳಿಯತೊಡಗಿತ್ತು. ತಾಂತ್ರಿಕ ವಿಚಾರವಾಗಿಯೂ ಸಾಕಷ್ಟು ಯೋಚನೆಗಳನ್ನು ಹೊಂದಿದ್ದ ಕರಿಬಸಪ್ಪ, ದಾಳಿಂಬೆ ಬೆಳೆಯ ನಡುವೆ ಅಲ್ಲಲ್ಲಿ ಸೋಲಾರ್ ಬಲ್ಬ್‌ಗಳನ್ನು ನಿಲ್ಲಿಸಿ, ಅದರ ಅಡಿಭಾಗದಲ್ಲಿ ಸಣ್ಣ ಪಾತ್ರೆಯಿಟ್ಟು ನೀರು ತುಂಬಿಸಿದರು. ಮರುದಿನ ಬೆಳಗಾಗುವ ಹೊತ್ತಿಗೆ ಪಾತ್ರೆಯ ತುಂಬ ಅನೇಕ ಬಗೆಯ ಕೀಟಗಳು ತುಂಬಿಹೋಗಿದ್ದವು.

ಹೊಸತನದ ಆವಿಷ್ಕಾರಕ್ಕೆ ಮುಂದಾದ ಕರಿಬಸಪ್ಪ, ಮುಂದೆ ಇದೇ ದಿಸೆಯಲ್ಲಿ ಹಲವು ಪ್ರಯೋಗಗಳನ್ನು ನಡೆಸಿದರು. ಅಂತಿಮವಾಗಿ 5 ವ್ಯಾಟ್ ಸೌರ ಫಲಕ ಮತ್ತು ಲಿಥಿಯಂ–ಐಯಾನ್ ಬ್ಯಾಟರಿಯನ್ನು ಬಳಸಿ, ಸೋಲಾರ್ ಟ್ರ್ಯಾಪ್ ಸಿದ್ಧಪಡಿಸಿಯೇಬಿಟ್ಟರು. ಸಂಪೂರ್ಣ ಸ್ವಯಂಚಾಲಿತವಾಗಿರುವ ಈ ಟ್ರ್ಯಾಪ್ ಕತ್ತಲಾವರಿಸುತ್ತಿದ್ದಂತೆಯೇ ಬೆಳಕು ಬೀರಲು ಪಾರಂಭಿಸುತ್ತದೆ. ರಾತ್ರಿ 9.30ಕ್ಕೆ ಸ್ವಯಂಚಾಲಿತವಾಗಿ ಸ್ವಿಚ್ ಆಫ್ ಆಗುತ್ತದೆ. ಬಲ್ಬ್‌ನ ತಳಭಾಗದಲ್ಲಿರಿಸಿದ ನೀರು ತುಂಬಿದ ಪಾತ್ರೆಯೊಳಗೆ ಬೀಳುತ್ತವೆ. ಈ ರೈತನ ಲೆಕ್ಕಾಚಾರ ಹೇಗಿದೆಯೆಂದರೆ, ಯಾವುದೇ ಬೆಳೆಗಳನ್ನು ಹಾಳುಮಾಡುವ ಕೀಟಗಳು ಕತ್ತಲಾವರಿಸುತ್ತಿದ್ದಂತೆ ದಾಳಿ ಮಾಡಿ, ಸುಮಾರು 9.30ರವರೆಗೂ ಕೆಲಸ ಮಾಡುತ್ತವೆ.

ಮುಂದೆ, ತಮ್ಮ ಆವಿಷ್ಕಾರದಿಂದ ಸುಮಾರು 3,500 ಸ್ಥಳೀಯ ರೈತರನ್ನು ತಲುಪಿ ಉಪಕಾರಿಯಾದರು. ಕೀಟಗಳ ಬಲೆ ಈಗ ಭಾರತದ ಆರು ರಾಜ್ಯಗಳಲ್ಲಿ 16 ಸಾವಿರಕ್ಕೂ ಹೆಚ್ಚು ರೈತರನ್ನು ತಲುಪಿದೆ. ಇತ್ತೀಚೆಗೆ ಮಲೇಷ್ಯಾ, ಯುಕೆ, ಬಹ್ರೇನ್, ನೇಪಾಳ ಮತ್ತು ಆಸ್ಟ್ರೇಲಿಯಾಗಳಿಗೂ ಈ ಸೋಲಾರ್ ಕೀಟಾಕರ್ಷಕ ಟ್ರ್ಯಾಪ್ ಪೂರೈಸಿದ್ದಾರೆ. ಕೃಷಿ ಇಲಾಖೆಯೂ ಕರಿಬಸಪ್ಪರ ಅನ್ವೇಷಣೆಯನ್ನು ಗುರುತಿಸಿ ಹಲವೆಡೆ ಪರಿಚಯಿಸಿದ್ದಾರೆ. ಇನ್ಫೋಸಿಸ್ ಸಂಸ್ಥೆ 'ಆರೋಹಣ' ಪ್ರಶಸ್ತಿ ನೀಡಿ ಗೌರವಿಸಿದೆ.

> 'ರೈತರಾಗಿ ನಾವೇ ಮಾರಕ ಕೀಟನಾಶಕಗಳನ್ನು ಬಳಸಿ ಬೆಳೆ ಬೆಳೆದು ಗ್ರಾಹಕರಿಗೆ ವಿಷವುಣಿಸುವ ಪ್ರಕ್ರಿಯೆ ನಿಲ್ಲಬೇಕು. ಈ ಹಿನ್ನೆಲೆಯಲ್ಲಿ ಸಾಕಷ್ಟು ಶ್ರಮವಹಿಸಿ, ಪ್ರಯೋಗಗಳನ್ನು ನಡೆಸಿ, ಅಂತಿಮ ರೂಪ ನೀಡಿದ್ದೇವೆ. ಈ ಟ್ರ್ಯಾಪ್ ಒಮ್ಮೆ ಅಳವಡಿಸಿದರೆ ಮತ್ತೆ ಅತ್ತ ತಲೆಹಾಕಬೇಕಿಲ್ಲ. ಬೆಳಿಗ್ಗೆ ಎಂದಿನಂತೆ ಜಮೀನಿಗೆ ತೆರಳಿದಾಗ ಬೆಳೆ ನಾಶ ಮಾಡುವ ಕೀಟಗಳಿಂದ ತುಂಬಿದ ನೀರಿನ ಪಾತ್ರೆಯನ್ನು ದೂರದಲ್ಲೆಲ್ಲಾದರೂ ಚೆಲ್ಲಿ ಮತ್ತೆ ಹೊಸ ನೀರನ್ನು ತುಂಬಿಸಿ ಬಂದರಾಯ್ತು. ನೀರಿಗೆ ಸ್ವಲ್ಪ ಶಾಂಪೂ ಅಥವಾ ಸೋಪಿನ ಹುಡಿ ಬಳಸಿದರೆ ಅನುಕೂಲ. ಹೂವು, ಹಣ್ಣು, ತರಕಾರಿ, ಭತ್ತ, ಅಡಕೆ ಹೀಗೆ ಎಲ್ಲಾ ವಿಧದ ಬೆಳೆಗಳಲ್ಲಿಯೂ ಈ ಟ್ರ್ಯಾಪ್ ಉಪಕಾರಿಯಾಗುತ್ತದೆ' ಎನ್ನುತ್ತಾರೆ ಕರಿಬಸಪ್ಪ.

## ತಾಲೂಕು ಮಟ್ಟದ ಪ್ರತಿಭಾ ಕಾರಂಜಿ



**■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಶಿಕ್ಷಣದೊಂದಿಗೆ ಮಕ್ಕಳ ಬಹುಮತ ಪ್ರತಿಭೆಯನ್ನು ಗುರುತಿಸಲು ಶಿಕ್ಷಣ ಇಲಾಖೆಯ ಪ್ರತಿಭಾ ಕಾರಂಜಿ ಕಾರ್ಯಕ್ರಮ ಸಹಕಾರಿಯಾಗಿದೆ ಎಂದು ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಯು.ಬಸವರಾಜಪ್ಪ ಹೇಳಿದರು.

ಪಟ್ಟಣದ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ, ಕಲೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ತಾಲೂಕು ದೈಹಿಕ ಪರಿವೀಕ್ಷಕ ಕೆ.ಷಣ್ಮುಖಪ್ಪ ಮಾತನಾಡಿ, ಪ್ರತಿಭಾ ಕಾರಂಜಿ ಗ್ರಾಮೀಣ ಪ್ರತಿಭೆ ಹಾಗೂ ಗ್ರಾಮೀಣ ಕಲೆಗಳ ಅಭಿವೃದ್ಧಿಗೆ ಪೂರಕವಾಗಿವೆ ಎಂದರು. ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ್ ಸಂಗಪ್ಪನವರ್, ಜಿಲ್ಲಾ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಮನೋಹರ್ ಎನ್.ಜೆ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ರಾಮಪ್ಪ ಎಸ್., ರಾಜ್ಯ ಸರ್ಕಾರಿ ನೌಕರರ ಒಕ್ಕೂಟದ ಅಧ್ಯಕ್ಷ ಎಂ.ಆಂಜನೇಯ, ಹರಪನಹಳ್ಳಿ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕಥೆಗಾರ ಮಂಜಣ್ಣ, ಕಾರ್ಯದರ್ಶಿ ಶರೀಫ್ ಮಕರಬಿ, ಹರಪನಹಳ್ಳಿ ತಾಲೂಕು ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಗುರುಮೂರ್ತಿ.ಬಿ, ಅರ್ಜುನ್ ಪರಸಪ್ಪ, ಪಿ.ಸುಬ್ಬಣ್ಣ., ಹರಪನಹಳ್ಳಿ ತಾಲೂಕು ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಚಂದ್ರಪ್ಪ ಹೆಚ್. ಕೆ, ಹನುಮಂತಪ್ಪ ಸೊಪ್ಪಿನ, ಲಕ್ಯ ನಾಯ್ಕ್, ಲತಾ.ಟಿ.ಹೆಚ್., ವೀರಮ್ಮ.ಪಿ, ದಯಾನಂದ್.ಡಿ., ಮದ್ದುಲ್ ಭಾಷಾ, ಸೂರ್ಯ ನಾಯಕ್, ಉಸ್ಮಾನ್, ಹನುಮಂತಪ್ಪ, ಪ್ರತಾಪ್ ಛಲವಾದಿ ಮುಂತಾದವರಿದ್ದರು. ಶಿಕ್ಷಣ ಸಂಯೋಜಕ ಕಬೀರ್ ನಾಯಕ್ ಕಾರ್ಯಕ್ರಮ ನಿರೂಪಿಸಿದರು.

## ನವೀಕೃತ ಉಪ ನೋಂದಣಾಧಿಕಾರಿಗಳ ಕಚೇರಿ ಉದ್ಘಾಟನೆ

**■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಪಟ್ಟಣದ ಪ್ರವಾಸಿ ಮಂದಿರದ ಅವರಣದಲ್ಲಿ ನವೀಕರಣಗೊಂಡ ಉಪ ನೋಂದಣಿ ಕಚೇರಿಯನ್ನು ಸೋಮವಾರ ಎಂ.ಪಿ. ಲತಾ ಮಲ್ಲಿಕಾರ್ಜುನ ಉದ್ಘಾಟಿಸಿದರು.

ಈ ಹಿಂದೆ ಪಟ್ಟಣದ ಹಳೆಯ ಪೊಲೀಸ್ ಠಾಣೆ ಎದುರುಗಡೆ ಇರುವ ಬ್ರಿಟಿಷರ ಕಾಲದ ಕಟ್ಟಡದಯಿೀ ಕಚೇರಿ ಕಾರ್ಯ ನಿರ್ವಹಿಸುತ್ತಿತ್ತು. ಮಳೆಗಾಲದಲ್ಲಿ ಕಡತಗಳು ಮಳೆಯಿಂದ ನೆನೆದು ಹಾಳುಗುವಂತಾಗಿತ್ತು. ಆನೇಕ ಸಂಘಟನೆಗಳು ಉಪನೋಂದಣಿ ಕಚೇರಿಯನ್ನು ಸ್ಥಳಾಂತರಿಸುವಂತೆ ಆನೇಕ ಬಾರಿ ಪ್ರತಿಭಟನೆ ನಡೆಸಿದ್ದರು.



ಈ ಕಾರ್ಯದಲ್ಲಿ ಕಾಳಜಿ ವಹಿಸಿದ ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಅವರಿಗೆ ತಾಲೂಕಿನ ವಿವಿಧ ಸಂಘಟನೆಗಳು, ಸಂಘ–ಸಂಸ್ಥೆಗಳು, ಮುಖಂಡರು, ರೈತ ಭಾಂದವರು ಅಭಿನಂದನೆಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಉಪ ವಿಭಾಗಧಿಕಾರಿ ಟಿ.ವಿ. ಪ್ರಕಾಶ್, ಕಾರ್ಯನಿರ್ವಹಣಾಧಿಕಾರಿ ಕೆ.ಆರ್. ಪ್ರಕಾಶ್, ಉಪನೋಂದಣಾಧಿಕಾರಿ ಲಿಂಗರಾಜ್, ಮಂಜುನಾಥ ಸೇರಿದಂತೆ ಕಛೇರಿ ಸಿಬ್ಬಂದಿಗಳು ಹಾಜರಿದ್ದರು.

## ಇನ್ನು 15 ದಿನದೊಳಗೆ ಅರ್ಹ ಫಲಾನುಭವಿಗಳ ಖಾತೆಗೆ 'ಗೃಹಲಕ್ಷ್ಮೀ' ಹಣ ಜಮೆ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಪ್ರಮುಖವಾದ ಗೃಹ ಲಕ್ಷ್ಮೀ ಯೋಜನೆಯಡಿ ಅರ್ಜಿ ಸಲ್ಲಿಸಿದವರಲ್ಲಿ ಕೆಲವರಿಗೆ ಒಂದು ಬಾರಿ ಹಣ ಬಂದಿದ್ದರೆ ಇನ್ನು ಕೆಲವರಿಗೆ ಇದುವರೆಗೆ ಹಣವೇ ಬಂದಿಲ್ಲ. ಅರ್ಜಿ ಸಲ್ಲಿಸಲು ಹೋದರೆ ಹತ್ತಾರು ದಾಖಲೆ ಕೇಳುತ್ತಾರೆ, ಅದು ಸರಿ ಇಲ್ಲ, ಇದನ್ನು ಬದಲಾಯಿಸಿಕೊಂಡು ಬನ್ನಿ ಎನ್ನುತ್ತಾರೆ ಹೀಗೆ ಮಹಿಳೆಯರು ಆರೋಪಿಸುತ್ತಿದ್ದರು.

ಕಳೆದ ಮೂರು ತಿಂಗಳುಗಳಿಂದ ಗೃಹ ಲಕ್ಷ್ಮಿ ಯೋಜನೆಯ ಲಾಭ ಪಡೆಯಲು ರಾಜ್ಯದ 1.2 ಕೋಟಿ ಗೃಹಿಣಿಯರು ನೋಂದಾಯಿಸಿಕೊಳ್ಳುತ್ತಿದ್ದಾರೆ.

ಆದರೆ ಯೋಜನೆ ಅನುಷ್ಠಾನಗೊಂಡು ಮೂರು ತಿಂಗಳು ಕಳೆದರೂ ಕೂಡ ಶೇಕಡಾ 30ರಷ್ಟು ಕೂಡ ಅರ್ಹ ಮಹಿಳೆಯರ ಖಾತೆಗೆ ಗೃಹಲಕ್ಷ್ಮೀ ಮಾಸಿಕ 2,000 ರೂಪಾಯಿ ಹಣ ಜಮಾ ಆಗುತ್ತಿಲ್ಲ. ಅರ್ಹ ಮಹಿಳೆಯರಿಗೆ ಹಣ ಏಕೆ ಜಮಾ ಆಗುತ್ತಿಲ್ಲ ಎಂಬ ಆರೋಪಗಳು ಕೇಳಿಬರುತ್ತಲೇ ಇದೆ.

ಇನ್ನು 15 ದಿನದೊಳಗೆ ಅರ್ಹ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಗೃಹಲಕ್ಷ್ಮೀ ಹಣ ಬರಲಿದೆ. ತಾಂತ್ರಿಕ ಸಮಸ್ಯೆಯಿಂದಾಗಿ ಮಹಿಳೆಯರ ಖಾತೆಗೆ ಹಣ ಹೋಗಿಲ್ಲ. ಹೀಗಾಗಿ ಇಂದು ತಾಂತ್ರಿಕ ಸಮಸ್ಯೆಗಳ ಕುರಿತು ಮಾಹಿತಿ ಪಡೆದಿದ್ದೇನೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದರು.

## ರಾಜ್ಯೋತ್ಸವದಲ್ಲಿ ಮನೋರಮಾ ವಿದ್ಯಾರ್ಥಿಗಳ ಸಂಭ್ರಮ

**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದಲ್ಲಿ ಜರುಗಿದ ಕರ್ನಾಟಕ–50 ಸಂಭ್ರಮದ ನಿಮಿತ್ತ ನಾಡ ದೇವತೆ ತಾಯಿ ಭುವನೇಶ್ವರಿ ಮೆರವಣಿಗೆಯಲ್ಲಿ ಮನೋರಮಾ ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಂಡು ಕಲಾ ತಂಡಗಳ ಜೊತೆ ಸೇರಿ ಡೊಳ್ಳು ಬಾರಿಸುವುದರ ಮೂಲಕ ವಿವಿಧ ಕಲಾ ತಂಡಗಳ ತಾಳಕ್ಕೆ ಹೆಜ್ಜೆ ಹಾಕಿ ಸಂಭ್ರಮಿಸಿದರು.



ನಾಡು–ನುಡಿ ಬಿಂಬಿಸುವ, ಸಂಸ್ಕೃತಿಯನ್ನು ಸಾರುವ ವಿವಿಧ ವೇಷ–ಭೂಷಣಗಳನ್ನು ಧರಿಸಿದ ಕಲಾವಿದರೊಂದಿಗೆ ಜೊತೆಗೂಡಿ ಸಂತಸ ಹಂಚಿಕೊಂಡರು. ಈ ಸಂಧರ್ಭದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಹ ಸಂಯೋಜಕರಾದ ಪ್ರೊ. ಸವಿತಾ ಪೂಜಾರ, ಪ್ರೊ. ರಾಘವೇಂದ್ರ ನವಲಗುಂದ, ಪ್ರೊ. ಅಲ್ವಿನಾ, ಪ್ರೊ. ಚೈತ್ರಾ ದಲಬಂಜನ, ಕನ್ನಡ ಉಪನ್ಯಾಸಕ ಪ್ರೊ. ಸಂಗಮೇಶ ಹಾದಿಮನಿ, ಪ್ರೊ. ಶಾಹಿದಾ ಶಿರಹಟ್ಟಿ, ಹರೀಶ ಬಾರಕೇರ, ವಿಜಯಲಕ್ಷ್ಮೀ ಸಾಹುಕಾರ, ಉಮಾ ದಿನ್ನಿ ಹಾಗೂ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಬಸವೇಶ್ವರ ಪದವಿ ಮಹಾವಿದ್ಯಾಲಯದ ಸಾಧನೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಆಗಸ್ಟ 2023ರಲ್ಲಿ ನಡೆದ ಬಿ.ಎ 6ನೇ ಸೆಮಿಸ್ಟರ್ ಪರೀಕ್ಷೆಯಲಿ ಸ್ಥಳೀಯ ಜಗದ್ಗುರು ತೋಂಟ–ದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ ಶೇ 100ರಷ್ಟು ಫಲಿತಾಂಶ ದಾಖಲಿಸಿದೆ.

ದ್ರಾಕ್ಷಾಯಣಿ ರೂಪನವರ ಕಾಲೇಜಿಗೆ ಪ್ರಥಮಸ್ಥಾನ ಪಡೆದಿದ್ದಾರೆ. ಅನಿತಾ ಕೋನಿಸಾಗರ ದ್ವಿತೀಯ ಹಾಗೂ ಪವಿತ್ರಾ ಕುರಿ, ಸುಷ್ಮಾಸ್ವರಾಜ್ ನವಲಗುಂದ, ಮೇಹಬೂಬ ಮುಂಡರಗಿ, ಯಶೋಧಾ ಬೆಲೇರಿ ತೃತೀಯ ಸ್ಥಾನ ಪಡೆದಿದ್ದಾರೆ.

ಸಾಧಕ ವಿದ್ಯಾರ್ಥಿಗಳನ್ನು ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್. ಎಸ್. ಪಟ್ಟಣಶೆಟ್ಟಿ, ಕಾಲೇಜಿನ ಆಡಳಿತ ಮಂಡಳಿಯ ಸರ್ವ ಸದಸ್ಯರು, ಪ್ರಾಚಾರ್ಯ ಎಂ.ಎಂ. ಬುರಡಿ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

### ತೋಂ. ಇಂಜಿನಿಯರಿಂಗ್ ಕಾಲೇಜಿನಲ್ಲಿ 'ಸೈನ್ಸ್ ಫೋರಮ್' ಉದ್ಘಾಟಿಸಿದ ಡಾ.ಶಿವಕುಮಾರ್ ಹೊನ್ನಾಳಿ

# ಒಂದು ಉತ್ತಮ ಪುಸ್ತಕ ಒಬ್ಬ ಗುರುವಿಗೆ ಸಮಾನ




**■ ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳು ಅನಾವಶ್ಯಕವಾಗಿ ಸಮಯ ವ್ಯರ್ಥ ಮಾಡದೆ, ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಕಾರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಹೆತ್ತವರಿಗೂ, ಓದಿದ ಸಂಸ್ಥೆಗೂ ಕೀರ್ತಿ ತನ್ನಿ. ಕಷ್ಟಪಟ್ಟು ಓದದೇ ಇಷ್ಟಪಟ್ಟು ಓದಿ, ವಿದ್ಯಾರ್ಥಿಗಳು ಪಡೆದ ಶಿಕ್ಷಣವನ್ನು ಜ್ಞಾನವನ್ನಾಗಿಯೂ, ಜ್ಞಾನವನ್ನು ಕೌಶಲ್ಯವನ್ನಾಗಿಯೂ ಪರಿವರ್ತಿಸಿಕೊಳ್ಳಬೇಕೆಂದು ರಾಣೇಬೆನ್ನೂರಿನ ಶ್ರೀ ತರಳಬಾಳು ಜಗದ್ಗುರು ತಾಂತ್ರಿಕ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ. ಎಂ. ಈ. ಶಿವಕುಮಾರ ಹೊನ್ನಾಳಿ ನುಡಿದರು.

ನಗರದ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ 'ಸೈನ್ಸ್ ಫೋರಮ್' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಿಕ್ಕ ಅವಕಾಶಗಳನ್ನು ಸದುಪಯೋಗ ಮಾಡಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಿ. ಪದವಿ ಮುಗಿದ ಮೇಲೆ ನಿಮಗೆ ಬರುವ ಮೊದಲ ಸಂಬಳದಲ್ಲಿ ಒಂದು ಒಳ್ಳೆಯ ಪುಸ್ತಕ ತೆಗೆದುಕೊಳ್ಳಿ. ಹಾಗೆ ನಿಮ್ಮ ತಾಯಿಗೆ ಒಂದು ಉತ್ತಮವಾದ ಉಡುಗೊರೆ ಕೊಡಿ. ಅದರೊಂದಿಗೆ ನಿಮ್ಮ ಆತ್ಮಬಲ ಹೆಚ್ಚಿಸಿಕೊಳ್ಳಿ. ಒಂದು ಉತ್ತಮ ಪುಸ್ತಕ ಒಬ್ಬ ಗುರುವಿಗೆ ಸಮಾನ. ಟಿವಿ, ಮೊಬೈಲ್‌ಗಳನ್ನು ತ್ಯಜಿಸಿ ಪುಸ್ತಕಗಳತ್ತ ಆಸಕ್ತಿ ಬೆಳೆಸಿಕೊಳ್ಳಿ ಎಂದು ಹೇಳಿದರು.

ವಿಜ್ಞಾನ ವಿಭಾಗದ ಮುಖ್ಯಸ್ಥ ಪ್ರೊ. ಸುನೀಲ್ ಪಾಟೀಲ್, ಸೈನ್ಸ್ ಫೋರಮ್ ಸಂಚಾಲಕ ಆನಂದ್ ಎ.ಹಳ್ಳಿ, ಉಪ ಪ್ರಾಂಶುಪಾಲ ಡಾ. ಈರಣ್ಣ ಕೊರಚಗಾಂ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಸುಹಾಸ್ ಪಿಳ್ಳಿ ಸ್ವಾಗತಿಸಿದರು. ಮಾನ್ಯ ಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು. ಸೌಮ್ಯ ಪಸೋಡಿ ವಂದಿಸಿದರು. ಈ ಸಂದರ್ಭದಲ್ಲಿ ಡಾ. ವಿ.ಟಿ ಮಾಗಳದ, ಡಾ. ಶಶಿಗೌಡ ಎಚ್, ಡಾ.ಮಧು ಕೆ.ಎನ್, ಡಾ. ಶ್ರೀಕಾಂತ ಕೆಂಗೂರಿ, ಕಾವ್ಯ ಅಬ್ಬಿಗೇರಿ, ವಿಜಯಲಕ್ಷ್ಮೀ, ಎ.ಎ.ಕುಂಬಾರ, ಶಂಭುಲಿಂಗಯ್ಯ ಹೀರೆಮಠ ಸೇರಿದಂತೆ ಪ್ರಥಮ ವರ್ಷದ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಹಾಜರಿದ್ದರು.

> ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶಪಾಲ ಡಾ. ಎಂ.ಎಂ. ಆವಟಿ ಮಾತನಾಡಿ, ಜೀವನದಲ್ಲಿ ಯಶಸ್ಸು ಸಾಧಿಸಲು ವಿದ್ಯಾರ್ಥಿಗಳು ಶ್ರಮ ಪಡಬೇಕು. ಶ್ರಮಕ್ಕೆ ಪ್ರತಿಫಲ ದೊರೆಯುತ್ತದೆ. ಸ್ಪರ್ಧಾತ್ಮಕ ಜಗತ್ತಿನಲ್ಲಿ ಉತ್ತಮ ಕೌಶಲ್ಯ ಮತ್ತು ಉತ್ತಮ ಬುದ್ಧಿಮತ್ತೆಯನ್ನು ಹೊಂದಬೇಕಾಗಿದೆ ಎಂದರು.

## ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

## ಮೂಲ ಸೌಕರ್ಯ ಒದಗಿಸುವಂತೆ ಮನವಿ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಇಲ್ಲಿನ ಡಂಬಳ ಗ್ರಾಮದ ಎಪಿಎಂಸಿ ಪಕ್ಕದಲ್ಲಿರುವ ಬಡಾವಣೆಯಲ್ಲಿ ಎನ್‌ಎ ನಿವೇಶನಗಳನ್ನು ಖರೀದಿಸಿ ಮನೆಗಳನ್ನು ಕಟ್ಟಿಕೊಂಡು ವಾಸ ಮಾಡುತ್ತಿದ್ದು, ಸೂಕ್ತ ರಸ್ತೆಗಳನ್ನು ನಿರ್ಮಿಸದಿರುವುದರಿಂದ ಅನಾನುಕೂಲವಾಗುತ್ತಿದೆ. ಚರಂಡಿ ವ್ಯವಸ್ಥೆಯೂ ಇಲ್ಲದಿರುವುದರಿಂದ ಅನಾರೋಗ್ಯದ ಸಮಸ್ಯೆಗೆ ತುತ್ತಾಗುತ್ತಿದ್ದೇವೆ. ಇದರೊಂದಿಗೆ ಇತರ ಮೂಲ ಸೌಕರ್ಯಗಳೂ ಇಲ್ಲದೆ ತೊಂದರೆ ಎದುರಿಸುವಂತಾಗಿದೆ. ಕೂಡಲೇ ಸೂಕ್ತ ಸೌಲಭ್ಯಗಳನ್ನು ಒದಗಿಸಬೇಕೆಂದು ಬಡಾವಣೆ ನಿವಾಸಿಗಳು ಆಡಳಿತಕ್ಕೆ ಮನವಿ ಸಲ್ಲಿಸಿದರು.

ಕಾರ್ಯದರ್ಶಿ ಜ್ಯೋತಿ ಅಂಗಡಿ ಮನವಿ ಸ್ವೀಕರಿಸಿ, ಈ ಕುರಿತು ಮುಂದಿನ ಕ್ರಮಕ್ಕಾಗಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಲಾಗುವುದು ಎಂದು ಹೇಳಿದರು. ಬಡಾವಣೆಯ ನಿವಾಸಿಗಳಾದ ಮಂಜುನಾಥ ಬಿಸನಳ್ಳಿ, ಅನ್ವರ ಪಠಾಣ, ಸುರೇಶ ಕೋತಂಬ್ರಿ, ಸೌಕತಲಿ ಸೋರಟೂರ, ಮಾರುತಿ ಯಲಿಗಾರ, ಮಂಜುನಾಥ ಭೋವಿ, ಹನಮವ್ವ ಕವಲೂರ, ಹುಗ್ಗವ್ವ, ರಿಯಾಜ ಕಾಸ್ತಾರ, ರಾಜೇಶಸಾಬ ದೊಡ್ಡಮನಿ, ಇಮಾಮಸಾಬ ಕಾಸ್ತಾರ, ಸುರೇಶ ಪಾರಪ್ಪನವರ, ಮಾಬುಸಾಬ ಗಾರಗಿ ಮುಂತಾದವರಿದ್ದರು.

## ಪ್ರವಚನದ ಪೂರ್ವಭಾವಿ ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಕೊಪ್ಪಳ ಸಂಸ್ಥಾನ ಮಠದ ಪೂಜ್ಯ ಶ್ರೀ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳ ಪ್ರವಚನವನ್ನು ಗದಗ ನಗರದಲ್ಲಿ ನವೆಂಬರ್ 24, ಶುಕ್ರವಾರದಿಂದ ಡಿಸೆಂಬರ್ 3, ರವಿವಾರದರವರೆಗೆ ಆಯೋಜಿಸಲಾಗಿದೆ. ಈ ಕಾರ್ಯಕ್ರಮದ ಸಿದ್ಧತೆಗಾಗಿ ಪೂರ್ವಭಾವಿ ಸಭೆಯನ್ನು ಗುರುವಾರ ಸಂಜೆ 4 ಗಂಟೆಗೆ ನಗರದ ಹುಲಕೋಟಿ ಸಹಕಾರ ಶಿಕ್ಷಣ ಸಂಸ್ಥೆಯ ಗ್ರಂಥಾಲಯದ ಸಭಾಭವನದಲ್ಲಿ (ಕೆ.ಎಚ್. ಪಾಟೀಲ ಕ್ರೀಡಾಂಗಣದ ಪಕ್ಕದಲ್ಲಿ) ಮಾಜಿ ಶಾಸಕ ಡಿ.ಆರ್. ಪಾಟೀಲ ಇವರು ಅಧ್ಯಕ್ಷತೆಯಲ್ಲಿ ಕರೆಯಲಾಗಿದೆ.

ಎಲ್ಲ ಸಮಾಜ ಬಾಂಧವರು ಸಭೆಗೆ ಆಗಮಿಸಿ ತಮ್ಮ ಸಲಹೆ, ಸೂಚನೆಗಳನ್ನು ನೀಡಿ ಪ್ರವಚನದ ಯಶಸ್ಸಿಗೆ ಸಹಕರಿಸಲು ಸಂಘಟಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಸ್ಪಿಂಕ್ಲರ್ ಪೈಪ್ ಸೌಲಭ್ಯಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ರೈತ ಸಂಪರ್ಕ ಕೇಂದ್ರ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರದಲ್ಲಿ 2023-24ನೇ ಸಾಲಿನಲ್ಲಿ ಸ್ಪಿಂಕ್ಲರ್ (ತುಂತುರು ನೀರಾವರಿ) ಘಟಕದಡಿ ಅರ್ಜಿ ಆಹ್ವಾನಿಸಲಾಗಿದ್ದು, ಆಸಕ್ತ ರೈತರು ಕೂಡಲೇ ಆಧಾರ್ ಕಾರ್ಡ್ ಪ್ರತಿ, ಪಹಣಿ, ನೀರಾವರಿ ಪ್ರಮಾಣಪತ್ರ, ಪಾಸ್‌ಪೋರ್ಟ್ ಸೈಜ್ ಫೋಟೋ-2, 20ರೂ. ಬಾಂಡ್, ಬ್ಯಾಂಕ್ ಪಾಸ್‌ಬುಕ್, ಜಾತಿ ಪ್ರಮಾಣ ಪತ್ರ (ಪಜಾ/ಪಪಂ ವರ್ಗದವರಿಗೆ ಮಾತ್ರ) ಒಂದು ಹೆಕ್ಟೇರ್‌ಗೆ 63ಎಂಎಂ (2ಇಂಚು) ರೈತರ ವಂತಿಗೆ 4139ರೂ., 75ಎಂಎಂ (2.5ಇಂಚು) ರೈತರ ವಂತಿಗೆ 4667ರೂ. ಕಟ್ಟಬೇಕೆಂದು ಸಹಾಯಕ ಕೃಷಿ ನಿರ್ದೇಶಕ ರೇವಣೆಪ್ಪ ಮನಗೂಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಲಿಸುತ್ತಿದ್ದ ರೈಲಿನ ಮೇಲೆ ಉರುಳಿದ ಕಾರು



■ ವಿಜಯಸಾಕ್ಷಿ ಸುದ್ದಿ, ಮುಂಬೈ

ಸೇತುವೆ ಮೇಲಿನಿಂದ ಉರುಳಿದ ಕಾರೊಂದು ಚಲಿಸುತ್ತಿದ್ದ ರೈಲಿನ ಮೇಲೆ ಬಿದ್ದ ಪರಿಣಾಮ ಮೂವರು ಸಾವನ್ನಪ್ಪಿ, ಇಬ್ಬರು ಗಾಯಗೊಂಡಿರುವ ಘಟನೆ ಮಹಾರಾಷ್ಟ್ರದಲ್ಲಿ ನಡೆದಿದೆ.

ಧರ್ಮಾನಂದ ಗಾಯಕ್ವಾಡ್, ಮಂಗೇಶ್ ಜಾಧವ್ ಮತ್ತು ನಿತಿನ್ ಜಾಧವ್ ಮೃತಪಟ್ಟವರು ಎಂದು ತಿಳಿದು ಬಂದಿದೆ. ಮೃತರ ಪೈಕಿ ಧರ್ಮಾನಂದ ಗಾಯಕ್ವಾಡ್ ಅವರು ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ(ಅಠವಳೆ) ಕಾರ್ಯಕರ್ತರಾಗಿದ್ದಾರೆ.

ಮುಂಬೈ-ಪನ್ವೇಲ್ ರಸ್ತೆಯಲ್ಲಿ ನೇರಲ್ ಕಡೆಗೆ ಕಾರು ಪ್ರಯಾಣಿಸುತ್ತಿತ್ತು. ಚಾಲಕನ ನಿಯಂತ್ರಣ ತಪ್ಪಿದ ಕಾರು ಸೇತುವೆಯಿಂದ ಉರುಳಿ ರೈಲಿನ ಮೇಲೆ ಬಿದ್ದಿದೆ. ಮಂಗಳವಾರ ಬೆಳಿಗ್ಗೆ 3 ಅಥವಾ 4 ಗಂಟೆ ಸಮಯಕ್ಕೆ ಈ ಅಪಘಾತ ಸಂಭವಿಸಿದೆ ಎಂದು ಪೊಲೀಸರು ಅಂದಾಜಿಸಿದ್ದಾರೆ.

### ಲಿಂ. ವಿರೂಪಾಕ್ಷಲಿಂಗ ಶ್ರೀಗಳವರ ಪುಣ್ಯ ಸ್ಮರಣೋತ್ಸವದಲ್ಲಿ ರಂಭಾಪುರಿ ಶ್ರೀಗಳು

# ನುಡಿ-ನಡೆಯೇ ಜೀವನ ಶ್ರೇಯಸ್ಸಿಗೆ ಮೂಲ

■ ವಿಜಯಸಾಕ್ಷಿ ಸುದ್ದಿ, ಕುಷ್ಟಗಿ

ಜೀವನದಲ್ಲಿ ಒಂದು ನಿರ್ದಿಷ್ಟ ಗುರಿಯಿರಬೇಕು. ಆ ಗುರಿ ಸಾಧನೆಗೆ ಪ್ರಾಮಾಣಿಕ ಪ್ರಯತ್ನ ಬೇಕು. ಮಾನವ ಜೀವನದ ಶ್ರೇಯಸ್ಸಿಗೆ ನುಡಿ-ನಡೆಗಳೇ ಮೂಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ತಾಲೂಕಿನ ಚಳಗೇರಾ ಹಿರೇಮಠದ ಲಿಂ. ವಿರೂಪಾಕ್ಷಲಿಂಗ ಶ್ರೀಗಳವರ 9ನೇ ವರ್ಷದ ಪುಣ್ಯ ಸ್ಮರಣೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಕಷ್ಟ ಬಂದಾಗ ಕಲ್ಲಿನಂತಿದ್ದು, ಸುಖ ಬಂದಾಗ ಹೂವಿನಂತೆ ಮೃದುವಾಗಿ ಬಾಳಬೇಕು. ತಿಳಿದವರ ಕೇಳಿ ತಿಳಿಯಾಗಿ ಬಾಳಿದರೆ ಜೀವನ ಸಾರ್ಥಕ. ಲಿಂ.ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು ಸತ್ಯ ಧರ್ಮದ ಹಾದಿಯಲ್ಲಿ ಮುನ್ನಡೆದು ಭಕ್ತರ ಬಾಳಿಗೆ ಬೆಳಕು ತೋರಿದರು. ನುಡಿ-ನಡೆ ಒಂದಾಗಿ ಬಾಳಿ ಸಮಾಜದ ಕಣ್ಣಾಗಿ ಎಲ್ಲರ ಮನದಂಗಳದಲ್ಲಿ ಸದಾ ಹಸಿರಾಗಿದ್ದಾರೆ. ಅವರ ಆದರ್ಶಗಳನ್ನು ಇಂದಿನ ವೀರಸಂಗಮೇಶ್ವರ ಶಿವಾಚಾರ್ಯ ಸ್ವಾಮಿಗಳು ರೂಢಿಸಿಕೊಂಡು ಶ್ರೀ ಮಠದ ಅಭಿವೃದ್ಧಿ ಮತ್ತು ಭಕ್ತ ಸಮುದಾಯಕ್ಕೆ ಸಂಸ್ಕಾರ ಕೊಡುವ ಮಹತ್ಕಾರ್ಯ ಮಾಡುತ್ತಿರುವುದು ತಮಗೆ ಸಂತೋಷ ತಂದಿದೆ ಎಂದರು. ಇದೇ ಸಂದರ್ಭದಲ್ಲಿ ಲಿಂ. ವಿರೂಪಾಕ್ಷಲಿಂಗ ಶಿವಾಚಾರ್ಯರ ಗದ್ದುಗೆ ಗೋಪುರಕ್ಕೆ ಶ್ರೀ ರಂಭಾಪುರಿ ಜಗದ್ಗುರುಗಳು ಕಳಸಾರೋಹಣ ನೆರವೇರಿಸಿದರು.



ನೇತೃತ್ವ ವಹಿಸಿದ ಚಳಗೇರಾ ಹಿರೇಮಠದ ವೀರಸಂಗಮೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಒಳ್ಳೆಯದಕ್ಕೆ ಬೆಲೆಯಿಲ್ಲ ಅನ್ನುವುದು ಎಷ್ಟು ಸತ್ಯವೋ ಆ ಒಳ್ಳೆತನ ನಮ್ಮ ಕೈ ಬಿಡಲ್ಲ ಅನ್ನುವುದು ಅಷ್ಟೇ ಸತ್ಯ ಎಂದು ತಿಳಿದು ಬಾಳಿದವರು ಲಿಂ. ಶ್ರೀ ವಿರೂಪಾಕ್ಷಲಿಂಗ ಶಿವಾಚಾರ್ಯರು. ಸುಖ-ದುಃಖಗಳನ್ನು ಸಮಾನವಾಗಿ ತಿಳಿದು ಸಹನೆಯಿಂದ ಬಾಳಿ ಬೆಳಕು ತೋರಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸತ್ಯದ ದಾರಿಯಲ್ಲಿ ನಡೆಯುವ ಜನರಿಗೆ ಹೆಚ್ಚು ಅಡ್ಡಿ-ಆತಂಕಗಳು ಬರುತ್ತವೆ. ಆದರೆ ಭಗವಂತ ಅವರ ಜೀವನ ದೋಣಿಯನ್ನು ಎಂದೂ ಮುಳುಗಲು ಬಿಡುವುದಿಲ್ಲ. ಲಿಂ. ಶ್ರೀ ವಿರೂಪಾಕ್ಷಲಿಂಗ ಶ್ರೀಗಳವರು ಸದಾ ಭಕ್ತರ ಶ್ರೇಯಸ್ಸಿಗಾಗಿ ಶ್ರಮಿಸಿದ್ದನ್ನು ಯಾರೂ ಮರೆಯಲಾಗದೆಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಅಬಕಾರಿ ಸಚಿವ ಆರ್.ಬಿ ತಿಮ್ಮಾಪುರ, ಕೊಪ್ಪಳ ಲೋಕಸಭಾ ಸದಸ್ಯ ಸಂಗಣ್ಣ ಕರಡಿ, ಕುಷ್ಟಗಿ ಶಾಸಕ ದೊಡ್ಡನಗೌಡ ಹೆಚ್.ಪಾಟೀಲ ಮಾತನಾಡಿದರು. ಮಾಜಿ ಸಚಿವ ಅಮರೇಗೌಡ ಪಾಟೀಲ ಬಯ್ಯಾಪುರ, ಅ.ಭಾ.ವೀ.ಯುವ ವೇದಿಕೆ ಅಧ್ಯಕ್ಷ ಜಯಂತಕುಮಾರ್ ಸಮಾರಂಭದಲ್ಲಿ ಉಪಸ್ಥಿತರಿದ್ದು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು. ರಾಜೇಶ್ ಹಿರೇಮಠ, ಕುಮಾರಸ್ವಾಮಿ ಹಿರೇಮಠ, ವೀರಯ್ಯಸ್ವಾಮಿ ಹಿರೇಮಠ, ಸಂಗನಬಸಪ್ಪ ಗದ್ದಿ, ಸ್ಮಜಾತಾ ನಾಗನಗೌಡ, ಕಮಲಪ್ಪ ಜಾಲಿಹಾಳ, ಚಂದ್ರಹಾಸ ಹೇರೂರ, ಮಲ್ಲಿಕಾರ್ಜುನ ಶೆಟ್ಟರ, ಶಾಂತಯ್ಯ ಹಿರೇಮಠ, ಬಸಟೆಪ್ಪ ಕುಂಬಳಾವತಿ ಸೇರಿದಂತೆ ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ವಿಶೇಷ ಗುರುರಕ್ಷೆಯನ್ನಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು. ಚಳಗೇರಾದ ಚನ್ನಯ್ಯ ಸೊಪ್ಪಿಮಠ ನಿರೂಪಿಸಿದರು.

> ಸಮಾರಂಭ ಉದ್ಘಾಟಿಸಿದ ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಸಂಸ್ಕೃತಿ ಹಾಗೂ ಕೊಪ್ಪಳ ಜಿಲ್ಲಾ ಸಚಿವರಾದ ಶಿವರಾಜ ತಂಗಡಗಿ ಮಾತನಾಡಿ, ಬದುಕಿನಲ್ಲಿ ಹೆಜ್ಜೆ ಗುರುತು ಉಳಿಯುವುದು ನಡತೆಯಿಂದಲೇ ಹೊರತು ನುಡಿಯಿಂದಲ್ಲ. ನಮ್ಮ ಬಳಿ ಏನಿದೆ, ಏನಿಲ್ಲ ಅನ್ನುವುದಕ್ಕಿಂತ ನೆಮ್ಮದಿ ಇದೆಯಾ ಎಂದು ಯೋಚಿಸುವುದು ಉತ್ತಮ. ನೆಮ್ಮದಿಗಿಂತ ಮಿಗಿಲಾದ ಸಂಪತ್ತು ಮತ್ತೊಂದಿಲ್ಲ. ಲಿಂ.ವಿರೂಪಾಕ್ಷಲಿಂಗ ಶ್ರೀಗಳವರ ಬದುಕು ಇತರರಿಗೆ ಮಾರ್ಗದರ್ಶನವಾಗಿತ್ತೇ ಹೊರತು ಮಾರಕವಾಗಿರಲಿಲ್ಲವೆಂದು ಸ್ಮರಿಸಿದರು.

## ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ, ಪುನಶ್ಚೇತನಕ್ಕೆ ದತ್ತು ಕಾರ್ಯಕ್ರಮ ಅನುಷ್ಠಾನ

▸▸ ಮೊದಲನೇ ಪುಟದಿಂದ

ಇನ್ನಿತರ ಸೌಲಭ್ಯಗಳನ್ನು ಕಲ್ಪಿಸಿ ಪ್ರವಾಸಿಗರನ್ನು ಆಕರ್ಷಿಸುವುದು ಮುಖ್ಯವಾಗಿದೆ. ಈ ದಿಶೆಯಲ್ಲಿ ಜಿಲ್ಲೆಯಲ್ಲಿರುವ ಸ್ಮಾರಕಗಳ ಬಗ್ಗೆ ಎಲ್ಲರೂ ವಿಶೇಷ ಗಮನ ನೀಡಬೇಕು ಎಂದು ಸಚಿವ ಪಾಟೀಲ ಹೇಳಿದರು.

ರಾಜ್ಯ ಸರ್ಕಾರವು ಈಗ ಅನುಷ್ಠಾನಗೊಳಿಸುತ್ತಿರುವ ದತ್ತು ಕಾರ್ಯಕ್ರಮದ ಅಡಿಯಲ್ಲಿ ಯಾದಗಿರಿ ಕೋಟೆಯನ್ನು ಸಹ ಹೈದರಾಬಾದ್ ಮೂಲದ ಹರ್ಷ ಲಾಹೋಟಿ ಇವರ ಸಂಸ್ಥೆಗೆ ದತ್ತು ನೀಡುವ ಒಡಂಬಡಿಕೆ ಸಹ ಆಗಿದ್ದು, ಇಂದು ಅವರಿಗೆ ಸನ್ಮಾನ ಸಹ ಮಾಡಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಪೂರ, ಯಾದಗಿರಿ ಶಾಸಕ ಚೆನ್ನಾರೆಡ್ಡಿ ಪಾಟೀಲ ತುನ್ನೂರ, ಜಿಲ್ಲಾಧಿಕಾರಿ ಡಾ.ಸುಶೀಲ ಬಿ, ಜಿಲ್ಲಾ ಪಂಚಾಯತ ಸಿಇಓ ಗರಿಮಾ ಪನ್ವಾರ, ಪ್ರವಾಸೋದ್ಯಮ ಇಲಾಖೆ ಆಯುಕ್ತ ದೇವರಾಜ, ನಿರ್ದೇಶಕರಾದ ಸಜೀಶ್ವರ, ಉಪ ನಿರ್ದೇಶಕರಾದ ಶ್ರೀಮತಿ ಮಂಜುಳಾ, ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕರಾದ ಜನಾರ್ದನ, ಕೃಷ್ಣ ಕೃತಿ ಫೌಂಡೇಶನ್ ನ ವ್ಯವಸ್ಥಾಪಕರಾದ ಹರ್ಷ ಲಾಹೋಟಿ, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶಾಂತಮ್ಮ, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ರಾಜಕೀಯ ನಿವೃತ್ತಿ ಘೋಷಿಸಿದ ಸದಾನಂದ ಗೌಡ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದ ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದ ಗೌಡ ಅವರು ಹಾಸನದಲ್ಲಿ ಚುನಾವಣಾ ರಾಜಕೀಯಕ್ಕೆ ನಿವೃತ್ತಿ ಘೋಷಿಸಿದ್ದಾರೆ. ಹಾಸನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದಿಂದ ಗರಿಷ್ಠ ಲಾಭ ಪಡೆದಿದ್ದೇನೆ. ಹೆಚ್ಚಿನದಕ್ಕೆ ಆಸೆ ಪಡುವುದಿಲ್ಲ ಎಂದೂ ತಿಳಿಸಿದ್ದಾರೆ.

ಚುನಾವಣಾ ರಾಜಕೀಯದಲ್ಲಿ ಮುಂದುವರಿಯದಿರಲು ನಿರ್ಧರಿಸಿದ್ದೇನೆ. ನನ್ನ 30 ವರ್ಷಗಳ ರಾಜಕೀಯ ಜೀವನದಲ್ಲಿ ಪಕ್ಷ



ನನಗೆ ಎಲ್ಲವನ್ನೂ ನೀಡಿದೆ. ನಾನು 10 ವರ್ಷ ಶಾಸಕನಾಗಿ, 20 ವರ್ಷ ಸಂಸದನಾಗಿ, ಒಂದು ವರ್ಷ ಮುಖ್ಯಮಂತ್ರಿಯಾಗಿ, 4 ವರ್ಷ ರಾಜ್ಯ ಪಕ್ಷದ ಅಧ್ಯಕ್ಷನಾಗಿ ಕಾರ್ಯನಿರ್ವಹಿಸಿದ್ದೇನೆ. ನರೇಂದ್ರ ಮೋದಿ ಸರ್ಕಾರದಲ್ಲಿ 7 ವರ್ಷ ಸಂಪುಟ ಸಚಿವನಾಗಿ ಸೇವೆ ಸಲ್ಲಿಸಿದ್ದೇನೆ. ನಾನು ಹೆಚ್ಚು ಆಸೆಪಟ್ಟರೆ, ನನ್ನನ್ನು ಸ್ವಾರ್ಥಿ ಎಂದು ಕರೆಯುತ್ತಾರೆ ಎಂದರು.

ಹಾಸನ ಜಿಲ್ಲೆಯಲ್ಲಿ ಬೆಳೆ ನಷ್ಟ ಸಮೀಕ್ಷೆ ನಡೆಸಿದ ಬಳಿಕ ಸದಾನಂದ ಗೌಡ ಈ ಹೇಳಿಕೆ ನೀಡಿದ್ದು, ರಾಜ್ಯದಲ್ಲಿ ಬರ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಬಿಜೆಪಿಯ ವಿವಿಧ ತಂಡಗಳು ಸಮೀಕ್ಷೆ ನಡೆಸುತ್ತಿವೆ. ವರದಿಯನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಸಲ್ಲಿಸಲು ಬಿಜೆಪಿ ನಾಯಕರು ನಿರ್ಧರಿಸಿದ್ದಾರೆ ಎಂದರು.

## ವಾಯುಮಾಲಿನ್ಯ ನಿಯಂತ್ರಿಸಲು ಮೋಡ ಬಿತ್ತನೆಗೆ ಚಿಂತನೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ವಾಯು ಮಾಲಿನ್ಯ ಮಿತಿಮೀರುತ್ತಿದ್ದು, ವಾಯು ಮಾಲಿನ್ಯ ನಿಯಂತ್ರಿಸಲು ಈ ತಿಂಗಳು ಮೋಡ ಬಿತ್ತನೆ ಮೂಲಕ ಕೃತಕ ಮಳೆ ಸುರಿಸಲು ಸರ್ಕಾರ ಯೋಜಿಸುತ್ತಿದೆ ಎಂದು ಪರಿಸರ ಸಚಿವ ಗೋಪಾಲ್ ರೈ ಅವರು ಬುಧವಾರ ಹೇಳಿದ್ದಾರೆ.

ಈ ಸಂಬಂಧ ಸಚಿವ ರೈ ಅವರು ಐಐಟಿ ಕಾನ್ಪುರ ವಿಜ್ಞಾನಿಗಳೊಂದಿಗೆ ಸಭೆ ನಡೆಸಿದ್ದು, ವಾತಾವರಣದಲ್ಲಿ ಮೋಡಗಳು ಅಥವಾ ತೇವಾಂಶವಿದ್ದರೆ ಮಾತ್ರ ಮೋಡ ಬಿತ್ತನೆ ಮಾಡಲು ಯತ್ನಿಸಬಹುದು ಎಂದಿದ್ದಾರೆ.

"ನವೆಂಬರ್ 20-21ರ ಸುಮಾರಿಗೆ ಮೋಡ ಬಿತ್ತನೆಗೆ ಸೂಕ್ತ ವಾತಾವರಣ ಸೃಷ್ಟಿಯಾಗಬಹುದು ಎಂದು ತಜ್ಞರು ಹೇಳಿದ್ದಾರೆ.

## ಸಹಕಾರಿ ಸಂಘಗಳ ಅಭಿವೃದ್ಧಿಗೆ ಸದಸ್ಯರ ಸಹಕಾರ ಅಗತ್ಯ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕೃಷಿ ಪತ್ತಿನ ಸಹಕಾರಿ ಸಂಘಗಳ ಅಭಿವೃದ್ಧಿಗೆ ಸಂಘದ ಸರ್ವ ಸದಸ್ಯರ ಸಹಕಾರ ಅಗತ್ಯವಾಗಿದೆ ಎಂದು ನಾಗಾವಿ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಬಿ.ಆರ್. ದೇವರೆಡ್ಡಿ ಹೇಳಿದರು.

ಅವರು ನಾಗಾವಿ ಗ್ರಾಮದ ಕೃಷಿ ಪತ್ತಿನ ಸಹಕಾರಿ ಸಂಘದ 2023-24ನೇ ಸಾಲಿನ ಒಟ್ಟು ವಾರ್ಷಿಕ ಲಾಭಾಂಶದಲ್ಲಿನ ಶೇ 12 ಡಿವಿಡೆಂಡ್‌ನ್ನು ಸಹಕಾರಿ ಸಂಘದ ಶೇರುದಾರರಿಗೆ ವಿತರಿಸಿ ಮಾತನಾಡಿದರು. ಈ ಕೃಷಿ ಪತ್ತಿನ ಸಹಕಾರಿ ಸಂಘ ಇಷ್ಟು ಬೆಳವಣಿಗೆ ಹೊಂದಲು ಶೇರುದಾರರು ಹಾಗೂ ಆಡಳಿತ ಮಂಡಳಿಯ ಸಹಾಯ, ಸಹಕಾರದಿಂದ ಸಾಧ್ಯವಾಗಿದೆ. ಹೀಗಾಗಿ, ಇದರ ಪ್ರತಿಫಲ ಎಲ್ಲರಿಗೂ ದೊರೆಯಲು ಕಾರಣವಾಗಿದೆ ಎಂದರು.

ಉಪಾಧ್ಯಕ್ಷ ದೇವಪ್ಪ ಕುರ್ತಕೋಟಿ, ಸಿ.ಬಿ. ದೊಡ್ಡಗೌಡರ, ಗೋವಿಂದರೆಡ್ಡಿ ಕುಷ್ಟರೆಡ್ಡಿ, ಕೆ.ಎಂ. ಗೋವಿಂದರೆಡ್ಡಿ, ರಾಜೇಸಾಬ ಕಾರಡಗಿ, ಸತ್ಯೆಪ್ಪ ತಾಂಮ್ರಗುಂಡಿ, ಮೈಲಾರೆಪ್ಪ ಛಲವಾದಿ, ಕಮಲವ್ವ ದುಂದೂರ, ಯಲ್ಲವ್ವ ಮರೆಡ್ಡಿ, ಸಕ್ರಪ್ಪ ಪಾಟೀಲ್, ಲಕ್ಷ್ಮಣ ಲಮಾಣಿ, ಲಕ್ಷ್ಮಣ ದೊಡ್ಡಮನಿ, ಆಯ್.ಬಿ. ಬಿಂಕದಕಟ್ಟಿ, ಗುರುಪಾದಪ್ಪ ಮೊರಬರೆಡ್ಡಿ, ದೇವರೆಡ್ಡಿ ಶದ್ನೇಕೊಪ್ಪ, ಅಡಿವೆಪ್ಪ ಮರಿಹನುಮರೆಡ್ಡಿ, ಸುಲೇಮಾನ್ ನದಾಫ್, ಉಳವಪ್ಪ ಶಿಗ್ಲಿ, ನಿಂಗಪ್ಪ ಕುರಿ, ಶಂಕ್ರಪ್ಪ ಜಂತ್ಲಿ, ಫಕ್ಕಿರೆಡ್ಡಿ ಮರೆಡ್ಡಿ, ಗೋವಿಂದಗೌಡರ ಭರಮಗೌಡರ, ಮಲ್ಲಯ್ಯ ರೆವಯ್ಯನವರ, ಎಂ.ಬಿ. ಮರೆಡ್ಡಿ, ಕೆ.ಎಂ. ಪೀಚಿ, ಪಿ.ಬಿ. ಹಿರೇಮಠ ಇದ್ದರು.

## ಸನ್ಮಾರ್ಗ ಕಾಲೇಜಿನಲ್ಲಿ ಅರ್ಥಶಾಸ್ತ್ರ ಕಾರ್ಯಾಗಾರ



■ ವಿಜಯಸಾಕ್ಷಿ ಸುದ್ದಿ, ಗದಗ

ಎಲ್ಲ ಶಾಸ್ತ್ರಗಳ ಅಧ್ಯಯನದ ಜೊತೆಗೆ ಪ್ರತಿಯೊಬ್ಬರಿಗೂ ಅವಶ್ಯವಿರುವ ಅರ್ಥಶಾಸ್ತ್ರವನ್ನು ಅರ್ಥ ಮಾಡಿಕೊಂಡಾಗ ಮಾತ್ರ ನಮ್ಮಲ್ಲಿ ರಾಷ್ಟ್ರೀಯ ಪ್ರಜ್ಞೆ, ರಾಷ್ಟ್ರ ಪ್ರೇಮ ಅಂಕುರಗೊಳ್ಳುತ್ತದೆ ಎಂದು ಖ್ಯಾತ ಅರ್ಥಶಾಸ್ತ್ರ ಪ್ರೊ. ರವಿ ಹುಚ್ಚಣ್ಣವರ ಅಭಿಪ್ರಾಯಪಟ್ಟರು.

ಇಲ್ಲಿನ ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಜರುಗಿದ ಒಂದು ದಿನದ 'ಅರ್ಥಶಾಸ್ತ್ರ ಕಾರ್ಯಾಗಾರ'ದಲ್ಲಿ ಭಾಗವಹಿಸಿ ಮಾತನಾಡಿ, ಜಾಣತನದಿಂದ ಹಣ ತೊಡಗಿಸುವುದು ಹೇಗೆ ಎಂಬುದನ್ನು 'ಹೂಡಿಕೆದಾರರ ಜಾಗೃತಿ ಕಾರ್ಯಕ್ರಮ'ದ ಮೂಲಕ ನಾಳಿನ ನಾಗರಿಕರಾದ ಮಹಾವಿದ್ಯಾಲಯದ ಮಕ್ಕಳಿಗೆ ತಿಳಿಸಿಕೊಟ್ಟರು.

ಅರ್ಥಶಾಸ್ತ್ರದ ಎಲ್ಲ ಸೂಕ್ಷ್ಮ ವಿಷಯಗಳನ್ನು ತಮ್ಮ ಉಪನ್ಯಾಸದಲ್ಲಿ ಅಳವಡಿಸಿಕೊಂಡು, ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗೆ ಮನಮುಟ್ಟುವ ರೀತಿಯಲ್ಲಿ ಎಲ್ಲ ಶಬ್ದಗಳ ಅರ್ಥ, ವಿವರಣೆ ಮತ್ತು ಮಹತ್ವ ತಿಳಿಸಿದರಲ್ಲದೆ, ಶೇರ್, ಶೇರ್ ಕ್ಯಾಪಿಟಲ್, ಡಿಬೆಂಚರ್ಸ್, ಬೇಡಿಕೆ ಮತ್ತು ಪೂರೈಕೆ, ಅವುಗಳ ಏರಿಳಿತ, ಶೇರ್ ಖರೀದಿ ಪದ್ಧತಿ, ಸೆಬಿಯ ಅರ್ಥ, ಕಾರ್ಯಗಳು, ಮಹತ್ವ ಹಾಗೂ ಡಿಮ್ಯಾಟ್ ಅಕೌಂಟ್ ತೆರೆಯುವ ವಿಧಾನಗಳನ್ನು ವಿವರಿಸಿದರು.

ಮಹಾವಿದ್ಯಾಲಯದ ಕನ್ನಡ ಉಪನ್ಯಾಸಕ ಹೇಮಂತ ದಳವಾಯಿ ಸರ್ವರನ್ನೂ ಸ್ವಾಗತಿಸಿದರೆ, ವಾಣಿಜ್ಯ ಸಂಯೋಜಕರಾದ ಪ್ರೊ. ಶಿವಕುಮಾರ ವಜ್ರಬಂಡಿ ಅತಿಥಿಗಳನ್ನು ಸಭೆಗೆ ಪರಿಚಯಿಸಿದರು. ಅರ್ಥಶಾಸ್ತ್ರ ಉಪನ್ಯಾಸಕಿ ಸಂಗೀತಾ ಬೀಳಗಿ ವಂದಿಸಿದರು.

ಕಾರ್ಯಾಗಾರದಲ್ಲಿ ಆಡಳಿತ ಮಂಡಳಿಯ ಚೇರ್‌ಮನ್ ಪ್ರೊ. ರಾಜೇಶ ಎಸ್.ಕುಲಕರ್ಣಿ, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ನಿರ್ದೇಶಕರಾದ ಪ್ರೊ. ರೋಹಿತ ಒಡೆಯರ್, ಪ್ರೊ. ರಾಹುಲ್ ಒಡೆಯರ್, ಉಪಪ್ರಾಚಾರ್ಯ ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ಉಡುಪಿ ದೇಶಪಾಂಡೆ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ಮಹಾವಿದ್ಯಾಲಯದ ಉಪನ್ಯಾಸಕರು, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

### ವಿಮೆ ಹಣ ನಿರಾಕರಿಸಿದ ಎಚ್.ಡಿ.ಎಫ್.ಸಿ.ಇರಗೋ ಜನರಲ್ ಇನ್ಸುರೆನ್ಸ್ ಕಂಪನಿಗೆ ಧಾರವಾಡ ಜಿಲ್ಲಾ ಗ್ರಾಹಕರ ಆಯೋಗ ನಿರ್ದೇಶನ

# 2 ಲಕ್ಷ 40 ಸಾವಿರ ದಂಡ, ಪರಿಹಾರ ನೀಡಲು ಆದೇಶ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಗದಗ ಜಿಲ್ಲೆಯ ನರಗುಂದದ ಸುನೀಲ ದೋಂಗಡಿ ಅನ್ನುವವರು ಬುಲೆರೋ ಪಿಕ್‌ಅಪ್ ವಾಹನ ನಂ.ಕೆಎ-26-ಎ-4181 ಗೆ ಮಾಲೀಕರಾಗಿದ್ದರು. ಅವರು ಸದರಿ ವಾಹನಕ್ಕೆ ಹುಬ್ಬಳ್ಳಿಯ ವಿದ್ಯಾನಗರದ ಎಚ್.ಡಿ.ಎಫ್.ಸಿ.ಇರಗೋ ಜನರಲ್ ಇನ್ಸುರೆನ್ಸ್ ಕಂಪನಿಯಿಂದ ವಿಮೆ ಮಾಡಿಸಿದ್ದರು. ಆ ವಿಮೆ ಚಾಲ್ತಿಯಿರುವಾಗ ದಿ:27/09/2019 ರಂದು ಆ ವಾಹನ ನರಗುಂದದ ಹಿರೇಹಳ್ಳ ಹತ್ತಿರ ಅಪಘಾತಕ್ಕೀಡಾಗಿ ಜಖಂಗೊಂಡಿತ್ತು. ಆ ವಾಹನದ ರಿಪೇರಿಗಾಗಿ ರೂ.2,04,967/- ಆಗುತ್ತದೆ ಅಂತಾ ಅಧಿಕೃತ ಸರ್ವಿಸ್ ಸೆಂಟರನಿಂದ ಎಸ್ಟಿಮೇಷನ್ ಪಡೆದು ಆ ಮೊತ್ತದ ಹಣ ಪರಿಹಾರವಾಗಿ ಕೊಡುವಂತೆ ಎದುರುದಾರ ವಿಮಾ ಕಂಪನಿಯವರಿಗೆ ಎಲ್ಲ ದಾಖಲೆಗಳ ಸಮೇತ ಕೋರಿಕೊಂಡಿದ್ದರು.

ಅಪಘಾತ ಕಾಲಕ್ಕೆ ಆ ವಾಹನಕ್ಕೆ ಫಿಟನೆಸ್ ಸರ್ಟಿಫಿಕೇಟ್ ಇಲ್ಲ ಅನ್ನುವ ಕಾರಣ ನೀಡಿ ವಿಮಾ ಕಂಪನಿಯವರು ದೂರುದಾರರ ಕ್ಲೇಮನ್ನು ತಿರಸ್ಕರಿಸಿದ್ದರು. ಅಪಘಾತವಾದ ನಂತರ ಆ ವಾಹನದ ಫಿಟ್ನೆಸ್ ಸರ್ಟಿಫಿಕೇಟನ್ನು ದೂರುದಾರ ನವೀಕರಿಸಿ ಕ್ಲೇಮ್ ಅರ್ಜಿ ಸಲ್ಲಿಸಿದ್ದರೂ ವಿಮಾ ಕಂಪನಿಯವರು ಅವರ ಕ್ಲೇಮನ್ನು ಒಪ್ಪಲಿಲ್ಲ. ಅಂತಹ ವಿಮಾ ಕಂಪನಿಯವರ ನಡವಳಿಕೆ ಗ್ರಾಹಕರ ರಕ್ಷಣಾಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ವಿಮಾ ಕಂಪನಿಯವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರ ದಿ:07/03/2023 ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಅಪಘಾತ ಕಾಲಕ್ಕೆ ಆ ವಾಹನಕ್ಕೆ ಅರ್ಹತಾ ಪತ್ರ ಇರಲಿಲ್ಲವಾದ್ದರಿಂದ ದೂರುದಾರ ಕ್ಲೇಮ ಪಡೆಯಲು ಅರ್ಹರಲ್ಲ ಅಂತಾ ಹೇಳಿ ಅವರ ದೂರನ್ನು ವಜಾ ಮಾಡುವಂತೆ ವಿಮಾ ಕಂಪನಿಯವರು ಆಕ್ಷೇಪಣೆ ಎತ್ತಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ. ಭೂತೆ, ಸದಸ್ಯರುಗಳಾದ ವಿಶಾಲಾಕ್ಷಿ. ಅ. ಬೋಳಶೆಟ್ಟಿ ಹಾಗೂ ಪ್ರಭು .ಸಿ. ಹಿರೇಮಠ ಅವರು ವಾಹನದ ಮೇಲೆ ವಿಮೆ ಚಾಲ್ತಿಯಿದೆ ಮತ್ತು ಆ ವಾಹನ ಅಪಘಾತದಲ್ಲಿ ಜಖಂಗೊಂಡು ಹುಬ್ಬಳ್ಳಿಯ ಸುತಾರಿಯಾ ಅಟೋ ಸೆಂಟರನಲ್ಲಿ ದುರಸ್ತಿಯಾಗಿದೆ. ರಿಪೇರಿ ಮಾಡಿಸಲು ರೂ.2,04,967/- ಖರ್ಚು ಮಾಡಿದ್ದಾರೆ. ಅಪಘಾತವಾದ ನಂತರ ದೂರುದಾರ ಗದಗ ಆರ್.ಟಿ.ಓ. ಕಛೇರಿಯಿಂದ ಅರ್ಹತಾ ಪತ್ರ ನವೀಕರಿಸಿರುವುದರಿಂದ ಕರ್ನಾಟಕ ಹೈಕೋರ್ಟ್ ತೀರ್ಪಿನನ್ವಯ ಅಪಘಾತ ಕಾಲಕ್ಕೆ ಆ ವಾಹನಕ್ಕೆ ಅರ್ಹತಾ ಪತ್ರ ಇತ್ತು ಅಂತಾ ಪರಿಗಣಿಸಬೇಕಾಗುತ್ತದೆ.

ಕಾರಣ ವಿಮಾ ಷರತ್ತಿನ ನಿಯಮದಂತೆ ವಾಹನ ದುರಸ್ತಿಗೆ ತಗುಲಿದ ವೆಚ್ಚವನ್ನು ಕೊಡುವುದು ವಿಮಾ ಕಂಪನಿಯವರ ಕರ್ತವ್ಯವಾಗಿದೆ. ಆ ರೀತಿ ವಿಮೆ ಹಣ ನೀಡಲು ಎದುರುದಾರ ವಿಮಾ ಕಂಪನಿಯವರು ನಿರಾಕರಿಸಿರುವುದರಿಂದ ಅಂತಹ ಅವರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಆಯೋಗ ಅಭಿಪ್ರಾಯಪಟ್ಟು ತೀರ್ಪು ನೀಡಿದೆ. ವಾಹನದ ದುರಸ್ತಿ ವೆಚ್ಚ ರೂ.2,05,000/- ಹಾಗೂ ಅದರ ಮೇಲೆ ಕ್ಲೇಮ ತಿರಸ್ಕರಿಸಿದ ದಿನಾಂಕದಿಂದ ಶೇ.8 ರಂತೆ ಬಡ್ಡಿ ಲೆಕ್ಕ ಹಾಕಿ ದೂರುದಾರನಿಗೆ ತೀರ್ಪು ನೀಡಿದ ಒಂದು ತಿಂಗಳ ಒಳಗಾಗಿ ಹಣ ಸಂದಾಯ ಮಾಡುವಂತೆ ವಿಮಾ ಕಂಪನಿಗೆ ಆಯೋಗ ಆದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲ ಹಾಗೂ ಮಾನಸಿಕ ತೊಂದರೆಗಾಗಿ ರೂ.25,000/- ಪರಿಹಾರ ಹಾಗೂ ಪ್ರಕರಣದ ಖರ್ಚು ವೆಚ್ಚ ರೂ.10,000/- ನೀಡುವಂತೆ ವಿಮಾ ಕಂಪನಿಗೆ ಆಯೋಗ ನಿರ್ದೇಶಿಸಿದೆ.

## ವರುಣನ ಆರ್ಭಟ: ಮುರಿದು ಬಿದ್ದ ಜಾತ್ರೆಯ ಸ್ವಾಗತ ಕಮಾನು

■ ವಿಜಯಸಾಕ್ಷಿ ಸುದ್ದಿ, ಹಾಸನ

ಹಾಸನ ಜಿಲ್ಲೆಯ ವಿವಿಧೆಡೆ ಬುಧವಾರ ಧಾರಾಕಾರ ಮಳೆ ಸುರಿದಿದ್ದು, ಮಳೆಯಲ್ಲಿಯೇ ಭಕ್ತರು ಹಾಸನಾಂಬಾ ದೇವಿಯ ದರ್ಶನ ಪಡೆದರು.

ದೇವಾಲಯದ ಸುತ್ತಮುತ್ತ ಧಾರಾಕಾರ ಮಳೆಯಾಗುತ್ತಿದ್ದರೂ, ದೇವಾಲಯದ ಮುಂದೆ ಹಚ್ಚಿದ್ದ ಕರ್ಪೂರ ಆರದೇ ಉರಿಯುತ್ತಿರುವುದು ಪವಾಡದಂತೆ ಗೋಚರಿಸಿತ್ತು.

ಈ ನಡುವೆ, ಹಾಸನಾಂಬಾ ಜಾತ್ರೆ ಹಿನ್ನೆಲೆಯಲ್ಲಿ ಹಾಕಿದ್ದ ಸ್ವಾಗತ ಕಮಾನು ಕಾರೊಂದರ ಮೇಲೆ ಉರುಳಿ ಬಿದ್ದಿದೆ. ಹಾಸನ ನಗರದ ಚನ್ನಪಟ್ಟಣ ವೃತ್ತದಲ್ಲಿ ಸ್ವಾಗತ ಕಮಾನು ಉರುಳಿ ಬಿದ್ದಿದ್ದು, ಕಾರು ಸಂಪೂರ್ಣ ಜಖಂ ಆಗಿದೆ. ಅದೃಷ್ಟವಶಾತ್ ಕಾರಿನಲ್ಲಿದ್ದವರು ಅಪಾಯದಿಂದ ಪಾರಾಗಿದ್ದಾರೆ. ಕೂಡಲೇ ಸ್ಥಳದಲ್ಲಿದ್ದವರು ಕಾರಿನ ಮೇಲಿನ ಸ್ವಾಗತ ಕಾಮಾನು ತೆರವುಗೊಳಿಸಿದರು.

ವಾರ್ಡನ್, ಅಧೀಕ್ಷಕರು ಇಲಾಖೆಯ ಪ್ರತಿ ವಸತಿ ನಿಲಯ ನಿಮ್ಮ ಮನೆ, ವಿದ್ಯಾರ್ಥಿಗಳನ್ನು ನಿಮ್ಮ ಮನೆಯ ಸದಸ್ಯರೆಂದು ಭಾವಿಸಿ: ಸಚಿವ ಮಹಾದೇವಪ್ಪ

# ಸಮಾಜ ಕಲ್ಯಾಣ ಇಲಾಖೆ ಇಮೇಜ್ ಬದಲಾವಣೆಗೆ ಸೂಚನೆ





**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಸಮುದಾಯ ಅಭಿವೃದ್ಧಿ, ಶಿಕ್ಷಣ ಕ್ರಾಂತಿ, ವಿದ್ಯಾರ್ಥಿಗಳಲ್ಲಿ ಉತ್ತಮ ಆರೋಗ್ಯ, ಶಿಸ್ತು, ರಾಷ್ಟ್ರಾಭಿಮಾನ ಬೆಳೆಸುವಲ್ಲಿ ಸಮಾಜ ಕಲ್ಯಾಣ ಇಲಾಖೆಯ ಪಾತ್ರ ಮುಖ್ಯವಾಗಿದ್ದು, ಇಲಾಖೆಯ ಬಗ್ಗೆ ಸಮಾಜದಲ್ಲಿ ಉತ್ತಮ ಇಮೇಜ್ ಬೆಳೆಸುವ ಜವಾಬ್ದಾರಿ ಮುಖ್ಯವಾಗಿ ವಸತಿ ನಿಲಯಗಳ ವಾರ್ಡನ್ ಮತ್ತು ಅಧೀಕ್ಷಕರ ಮೇಲಿದೆ. ಅವರು ನಮ್ಮ ಇಲಾಖೆಯ ರಾಯಭಾರಿಗಳಿದ್ದಂತೆ ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ ಹೇಳಿದರು.

ಅವರು ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಬೆಳಗಾವಿ ವಿಭಾಗ ಮಟ್ಟದ ಸಮಾಜ ಕಲ್ಯಾಣ ಇಲಾಖೆ ಮತ್ತು ಇಲಾಖೆ ವ್ಯಾಪ್ತಿಯ ಎಲ್ಲ ನಿಗಮ, ಮಂಡಳಿ, ಆಯೋಗಗಳಿಂದ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಆಯಾ ಜಿಲ್ಲೆಗಳಲ್ಲಿ ಇಲಾಖೆಯಿಂದ ನಿರ್ಮಿಸುತ್ತಿರುವ ವಸತಿ ನಿಲಯದ ಕಟ್ಟಡಗಳ ಗುಣಮಟ್ಟ ಮತ್ತು ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಲು ಅಧಿಕಾರಿಗಳು ಕ್ರಮವಹಿಸಬೇಕು. ಧಾರವಾಡ ಜಿಲ್ಲೆ ಶೈಕ್ಷಣಿಕ ಹಬ್ಬ ಆಗಿರುವುದರಿಂದ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರ ಮನವಿ ಮೇರೆಗೆ ವಿಶೇಷವಾಗಿ ಧಾರವಾಡ ಜಿಲ್ಲೆಗೆ ಹೆಚ್ಚು ವಸತಿನಿಲಯಗಳ ನಿರ್ಮಾಣಕ್ಕೆ ಅನುದಾನ, ಅನುಮೋದನೆ ನೀಡಲಾಗುವುದು. ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರು ಪ್ರಸ್ತಾವನೆ ಸಲ್ಲಿಸಲಿ ಎಂದು ಸಚಿವರು ಸೂಚಿಸಿದರು.

ಬೆಳಗಾವಿ ವಿಭಾಗದ ಏಳು ಜಿಲ್ಲೆಗಳಲ್ಲಿ 206 ಬಾಲಕರ ಹಾಗೂ 64 ಬಾಲಕಿಯರ ಮೆಟ್ರಿಕ್ ಪೂರ್ವ ವಸತಿ ನಿಲಯಗಳು ಸೇರಿ ಒಟ್ಟು 270 ವಿದ್ಯಾರ್ಥಿ ವಸತಿ ನಿಲಯಗಳಿವೆ. ಮೆಟ್ರಿಕ್ ಪೂರ್ವ 14,619 ಬಾಲಕರು ಮತ್ತು 5,722 ಬಾಲಕಿಯರು ಸೇರಿ ಒಟ್ಟು 20,341 ವಿದ್ಯಾರ್ಥಿ, ವಿದ್ಯಾರ್ಥಿನೀಯರು ಸಮಾಜ ಕಲ್ಯಾಣ ವಸತಿ ನಿಲಯಗಳಲ್ಲಿ ಅಧ್ಯಯನ ಮಾಡುತ್ತಿದ್ದಾರೆ.

ಏಳು ಜಿಲ್ಲೆಗಳು ಸೇರಿ ಮೆಟ್ರಿಕ್ ನಂತರದ 87 ಪುರುಷ ಮತ್ತು 52 ಮಹಿಳಾ ಸೇರಿ 139 ವಿದ್ಯಾರ್ಥಿ ನಿಲಯಗಳಿವೆ. ಒಟ್ಟು 14,963 ಪುರುಷ ಹಾಗೂ 8,520 ಮಹಿಳಾ ಸೇರಿ ಒಟ್ಟು 23,483 ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ. ಎಲ್ಲ ವಿದ್ಯಾರ್ಥಿಗಳಿಗೆ ಉತ್ತಮ ಊಟ, ಶೈಕ್ಷಣಿಕ ಸೌಲಭ್ಯ ಮತ್ತು ಮೂಲಸೌಕರ್ಯಗಳನ್ನು ಇಲಾಖೆಯಿಂದ ನೀಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಪರಿಶಿಷ್ಟ ಜಾತಿ ಮತ್ತು ಜನಾಂಗದವರಿಗೆ ಸ್ಮಶಾನ ಭೂಮಿ ಖರೀದಿಸಿ, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಬೆಳಗಾವಿ ವಿಭಾಗದ 7 ಜಿಲ್ಲೆಗಳು ಸೇರಿ 1,706.06 ರೂ. ಲಕ್ಷಗಳ ಮೊತ್ತದ ಅನುದಾನ ಮಂಜೂರಾತಿ ನೀಡಲಾಗಿದೆ.

ಇದರಲ್ಲಿ ಸುಮಾರು 31 ಗ್ರಾಮಗಳಿಗಾಗಿ 21.08 ಎಕರೆ ಭೂಮಿಯನ್ನು ಖರೀದಿಸಲಾಗಿದೆ. ಮತ್ತು ಸ್ಮಶಾನ ಭೂಮಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು 139 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಪ್ರಧಾನ ಮಂತ್ರಿ ಆದರ್ಶ ಗ್ರಾಮ ಯೋಜನೆಯಡಿಯಲ್ಲಿ 7 ಜಿಲ್ಲೆಗಳು ಸೇರಿ 185 ಗ್ರಾಮಗಳನ್ನು ಆಯ್ಕೆ ಮಾಡಿಕೊಂಡು ವಿವಿಧ ಕಾಮಗಾರಿ ಕೈಗೊಳ್ಳಲಾಗಿದೆ ಎಂದು ಸಚಿವರು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಯೋಜನೆ ಮತ್ತು ಕಾರ್ಯಕ್ರಮಗಳು ಸಮಾಜದ ಅಭಿವೃದ್ಧಿ ಮತ್ತು ಸಾರ್ವಜನಿಕರ ಜೀವನ ಉತ್ತಮ ಪಡಿಸುವಿಕೆಯಲ್ಲಿ ಪ್ರಮುಖ ಪಾತ್ರ ವಹಿಸುವುದರಿಂದ ಇಲಾಖೆಯ ತಾಲೂಕು ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳು ಹೆಚ್ಚು ಕಾಳಜಿ ಮತ್ತು ಕಳಕಳಿಯಿಂದ ತಮ್ಮ ಕರ್ತವ್ಯಗಳನ್ನು ನಿರ್ವಹಿಸಬೇಕೆಂದು ಸಚಿವ ಡಾ.ಹೆಚ್.ಚಿ. ಮಹಾದೇವಪ್ಪ ತಿಳಿಸಿದರು.

ಶಾಸಕ ಅಬ್ಬಯ್ಯ ಪ್ರಸಾದ ಅವರು ಮಾತನಾಡಿ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಅಟ್ರಾಸಿಟಿ ಕೇಸ್‌ಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, ಅನ್ಯಾಯಕ್ಕೆ ಒಳಗಾದವರಿಗೆ ಪರಿಹಾರ ಮತ್ತು ನ್ಯಾಯ ಒದಗಿಸುವಲ್ಲಿ ಹೆಚ್ಚು ಪ್ರಯತ್ನಿಸಬೇಕು. ಅನುಕಂಪ ಆಧಾರದ ಉದ್ಯೋಗ ನೀಡುವಲ್ಲಿ ಮಾನವೀಯತೆ ತೋರಬೇಕೆಂದು ಅವರು ಹೇಳಿದರು.

ಶಾಸಕ ಎನ್.ಎಚ್. ಕೋನರೆಡ್ಡಿ ಅವರು ಮಾತನಾಡಿ, ಧಾರವಾಡ ಜಿಲ್ಲೆಗೆ ವಿದ್ಯಾರ್ಥಿಗಳ ವಸತಿ ನಿಲಯದ ಬೇಡಿಕೆ ಇದ್ದು, ಸಚಿವರು ಹೆಚ್ಚಿನ ಅನುದಾನ ನೀಡಬೇಕು. ಮತ್ತು ವಸತಿ ನಿಲಯದಲ್ಲಿರುವ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸೌಕರ್ಯಗಳನ್ನು ಹೆಚ್ಚಿಸಬೇಕೆಂದು ಹೇಳಿದರು.

ವೇದಿಕೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಕ್ಯಾಪ್ಟನ್ ಪಿ.ಮಣಿವಣ್ಣನ, ಆಯುಕ್ತ ರಾಕೇಶಕುಮಾರ ಮತ್ತು ರಾಜ್ಯ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಗಳ ರಾಜ್ಯ ಸಲಹಾ ಸಮಿತಿ ಸದಸ್ಯ ಹಾಗೂ ಸರಕಾರದ ನಿವೃತ್ತ ಪ್ರಧಾನ ಕಾರ್ಯದರ್ಶಿ ಇ.ವೆಂಕಟಾಚಲ, ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಮಹಾನಗರ ಪೊಲೀಸ್ ಆಯುಕ್ತೆ ರೇಣುಕಾ ಸುಕುಮಾರ, ಬೆಳಗಾವಿ ವಿಭಾಗದ ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯದ ಉಪ ಪೊಲೀಸ್ ವರಿಷ್ಠಾಧಿಕಾರಿ ರವೀಂದ್ರ ಗಡಾದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ್ ಇದ್ದರು.

> ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಪೂರೈಸುವ ಆಹಾರದ ಗುಣಮಟ್ಟ ಕಾಪಾಡಿಕೊಂಡು ಬರಲು ಅಗತ್ಯ ಅನುದಾನ ಮತ್ತು ಯೋಜನೆಗೆ ತಿದ್ದುಪಡಿಗಳನ್ನು ತರಲಾಗುವುದು. ಜನವರಿ 2023 ರಿಂದ ಇಲ್ಲಿಯವರೆಗೆ ಬೆಳಗಾವಿ ವಿಭಾಗದ 7 ಜಿಲ್ಲೆಗಳು ಸೇರಿ ಒಟ್ಟು 343 ದೌರ್ಜನ್ಯ ಪ್ರಕರಣಗಳು ದಾಖಲಾಗಿದ್ದು, 533 ಜನ ಸಂತ್ರಸ್ಥರಿದ್ದಾರೆ. 482.60 ಲಕ್ಷ ಪರಿಹಾರ ಮೊತ್ತ ವಿತರಿಸಲಾಗಿದ್ದು, ಇದರಲ್ಲಿ ಸುಮಾರು 8 ಲಕ್ಷ ಬಾಕಿ ಮೊತ್ತವಿದೆ. ದೌರ್ಜನ್ಯ ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆ ಆಗುವ ಪ್ರಮಾಣ ಕಡಿಮೆ ಇದ್ದು, ಈ ಕುರಿತು ಡಿಆರ್‌ಸಿ ಕಾಯ್ದೆಗೆ ತಿದ್ದುಪಡಿ ತಂದು ನಾಗರಿಕ ಹಕ್ಕು ಪೊಲೀಸ್‌ರಿಗೆ ಎಫ್‌ಐಆರ್ ಹಾಗೂ ತನಿಖೆಯ ಕುರಿತು ಹೆಚ್ಚಿನ ಅಧಿಕಾರ ನೀಡಲು ಸರ್ಕಾರ ನಿರ್ಧರಿಸಿದೆ ಎಂದು ಸಚಿವರು ತಿಳಿಸಿದರು.

# ನಿವೇಶನರಹಿತ ಕುಟುಂಬಗಳಿಗೆ ವಸತಿ ಸೌಲಭ್ಯಕ್ಕಾಗಿ ಮನವಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಸ್ಲಂ ಜನಾಂದೋಲನ ಕರ್ನಾಟಕ ಮತ್ತು ರಾಯಚೂರು ಸ್ಲಂ ನಿವಾಸಿಗಳ ಕ್ರಿಯಾ ವೇದಿಕೆ ಸಂಘಟನೆಯಿಂದ ರಾಯಚೂರು ನಗರದ ನಿವೇಶನ ರಹಿತರಿಗೆ ನಿವೇಶನ ಹಂಚಿಕೆ ಹಾಗೂ ಪ್ರಧಾನ ಮಂತ್ರಿಗಳ ಆವಾಸ್ ಯೋಜನೆಡಿಯಲ್ಲಿ ಮನೆಗಳನ್ನು ನಿರ್ಮಿಸಲು ಆಗ್ರಹಿಸಿ ಕಳೆದ 10 ದಿನಗಳಿಂದ ಸ್ಥಳೀಯ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಅನಿರ್ದಿಷ್ಟ ಹೋರಾಟ ನಡೆಸುತ್ತಿದ್ದು, ಕೂಡಲೇ ಇವರ ಬೇಡಿಕೆಗಳಿಗೆ ಆದ್ಯತೆ ನೀಡಿ ನಿವೇಶನ ಹಂಚಿಕೆ ಮಾಡಬೇಕೆಂದು ಆಗ್ರಹಿಸಿ ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಜಿಲ್ಲಾಧಿಕಾರಿಗಳ ಮುಖಾಂತರ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಶರಣ ಪ್ರಕಾಶ ಪಾಟೀಲರಿಗೆ ಮನವಿ ಸಲ್ಲಿಸಲಾಯಿತು.

ಸ್ಲಂ ಜನಾಂದೋಲನ–ಕರ್ನಾಟಕ ರಾಜ್ಯ ಸಂಚಾಲಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ರಾಯಚೂರು ನಗರದ ನಿವೇಶನ ರಹಿತರಿಗೆ ನಿವೇಶನ ಹಕ್ಕುಪತ್ರ ನೀಡಿ ಹಲವು ವರ್ಷಗಳಾದರೂ ಜಿಲ್ಲಾಡಳಿತ ಮತ್ತು ಸ್ಥಳೀಯ ನಗರಸಭೆ ಫಲಾನುಭವಿಗಳಿಗೆ ಹಸ್ತಾಂತರ ಮಾಡದೇ ಅನ್ಯಾಯವನ್ನು ಮಾಡುತ್ತಿದ್ದಾರೆ. ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ನಿವೇಶನ ರಹಿತರ ಬೇಡಿಕೆಗಳಿಗೆ ಸ್ಪಂದಿಸದಿರುವುದು ಖಂಡನೀಯ. ಸಚಿವರು ಇದನ್ನು ಗಂಭೀರವಾಗಿ ಪರಿಗಣಿಸಿ ನಿವೇಶನ ಹಂಚಿಕೆ ಮಾಡಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸ್ಲಂ ಸಮಿತಿ ಪ್ರಧಾನ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಜಾಫರ ಢಾಲಾಯತ, ಶಂಕ್ರಪ್ಪ ಮುಂಡರಗಿ, ಮಕ್ತುಮಸಾಬ ಮುಲ್ಲಾನವರ, ವಿಶಾಲಕ್ಷಿ ಹಿರೇಗೌಡ್ರ, ಖಾಜೇಸಾಬ ಇಸ್ಮಾಯಿಲನವರ, ವಂದನಾ ಶ್ಯಾವಿ, ನಜಮುನಿಸಾ ಮುರಗೋಡ ಹಾಗೂ ಸಮಿತಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಸಾಮಾಜಿಕ ಮಾಧ್ಯಮಗಳಿಗೆ ಕೇಂದ್ರ ಸರ್ಕಾರ ಎಚ್ಚರಿಕೆ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಬಹುಬಾಷಾ ನಟಿ ರಶ್ಮಿಕಾ ಮಂದಣ್ಣ ಅವರ ಡೀಪ್ ಫೆಕ್ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆದ ಬೆನ್ನಲ್ಲೆ ಕೇಂದ್ರ ಸರ್ಕಾರ ಸಾಮಾಜಿಕ ಮಾಧ್ಯಮ ಕಂಪನಿಗಳಿಗೆ ಖಡಕ್ ಎಚ್ಚರಿಕೆ ನೀಡಿದೆ.

ಇದಕ್ಕೆ ಕಡಿವಾಣ ಹಾಕಲು ಮುಂದಾಗಿರುವ ಕೇಂದ್ರ ಸರ್ಕಾರ ಸಾಮಾಜಿಕ ಮಾಧ್ಯಮಗಳ ಮಧ್ಯವರ್ತಿಗಳಿಗೆ ಸಲಹೆ ನೀಡಿದೆ. ಸರ್ಕಾರದ ಈ ಸಲಹೆಗಳನ್ನು ಗಂಭೀರವಾಗಿ ಪರಿಗಣಿಸಬೇಕು, ತಪ್ಪು ಮಾಹಿತಿ ಹರಡದಂತೆ ಸದಾ ಗಮನವಹಿಸಬೇಕು. ಸಾಮಾಜಿಕ ಮಾಧ್ಯಮಗಳಲ್ಲಿ ತಪ್ಪು ಸಂದೇಶ, ಮಾಹಿತಿ, ನಕಲಿ ಫೋಟೋ–ವಿಡಿಯೋಗಳ ಗುರುತಿಸಲು ಸಮಂಜಸವಾದ ಪ್ರಯತ್ನಗಳನ್ನು ಮಾಡಲು ಕೇಂದ್ರ ಸರ್ಕಾರ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ಹೆಚ್ಚುತ್ತಿರುವ ಡೀಪ್‌ಫೇಕ್ ಸಮಸ್ಯೆಯನ್ನು ಪರಿಹರಿಸಲು ಸಾಮಾಜಿಕ ಮಾಧ್ಯಮ ಕಂಪನಿಗಳಿಗೆ ಪ್ರಮಾಣಿಕ ಪ್ರಯತ್ನ ಮಾಡುವಂತೆ ಹೇಳಿದೆ. ಒಂದು ವೇಳೆ ತಡೆಯುವಲ್ಲಿ ವಿಫಲವಾದರೆ ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದಿರುವ ಕೇಂದ್ರ, ಐಟಿ ನಿಯಮಗಳು–2021ರ ಪ್ರಕಾರ ನಕಲಿ, ತಪ್ಪು ಮಾಹಿತಿಯ ಪೋಸ್ಟ್‌ಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ತಪ್ಪು ಮಾಹಿತಿ ಅಥವಾ ವಿಷಯ ಹೋಸ್ಟ್ ಮಾಡದಂತೆ ಬಳಕೆದಾರರನ್ನು ತಡೆಯಲು ಸೂಚನೆ ಇದೆ. ಇಂತವುಗಳು ಕಂಡುಬಂದಲ್ಲಿ 36 ಗಂಟೆಗಳ ಒಳಗೆ ತೆಗೆದುಹಾಕಬೇಕು ಎಂಬ ನಿಯಮವಿದ್ದು, ಇದನ್ನು ಎಲ್ಲ ಸಾಮಾಜಿಕ ಮಾಧ್ಯಮಗಳು ಪಾಲಿಸಬೇಕು. ಐಟಿ ಕಾಯಿದೆ ಮತ್ತು ನಿಯಮಗಳ ಸಂಬಂಧಿತ ನಿಬಂಧನೆಗಳ ಪ್ರಕಾರ ಕಾರ್ಯನಿರ್ವಹಿಸಲು ವಿಫಲವಾದರೆ, ಮಾಹಿತಿ ತಂತ್ರಜ್ಞಾನ ಕಾಯಿದೆ, 2000ರ ಸೆಕ್ಷನ್ 79(1) ಅಡಿಯಲ್ಲಿ ಲಭ್ಯವಿರುವ ರಕ್ಷಣೆಯನ್ನು ಆಯಾ ಸಂಸ್ಥೆಗಳು ಕಳೆದುಕೊಳ್ಳಲಿವೆ.



ಅಂಬೇಡ್ಕರ್ ನಗರದಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳ ಸಮೀಕ್ಷಾ ಕಾರ್ಯ

# ಮಕ್ಕಳು ಶಾಲೆಯಿಂದ ಹೊರಗುಳಿಯದಂತೆ ಕ್ರಮವಹಿಸಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಬಡತನ, ಕೂಲಿ, ವಲಸೆ, ಜೀತಪದ್ಧತಿ, ಬಾಲ್ಯ ವಿವಾಹ, ಬೀದಿ ಮಗು, ಅನಾಥ ಮಗು, ಅನಾರೋಗ್ಯ ಪೀಡಿತ ಮಗು, ಶಾಲೆಯ ಬಗ್ಗೆ ಆಸಕ್ತಿ ಇಲ್ಲದೇ ಇರುವ ಮಕ್ಕಳನ್ನು ಹಾಗೂ ನಾನಾ ಕಾರಣಗಳಿಂದ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಸಮೀಕ್ಷಾ ಕಾರ್ಯದ ಮೂಲಕ ಪತ್ತೆ ಹಚ್ಚಿ ಸಮೀಪದ ಸರಕಾರಿ ಶಾಲೆಗೆ ದಾಖಲಿಸಿ ಶಿಕ್ಷಣ ಕೊಡಿಸುವ ಉದ್ದೇಶವಾಗಿದೆ ಎಂದು ಬಿಆರ್‌ಪಿ ಪ್ರಕಾಶ ಮಂಗಳೂರ ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಗದಗ ಶಹರ ವಲಯದ ವತಿಯಿಂದ ಅಂಬೇಡ್ಕರ್ ನಗರದಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳ ಸಮೀಕ್ಷಾ ಕಾರ್ಯದಲ್ಲಿ ಅವರು ಮಾತನಾಡಿದರು.

ಕಾನೂನಿನ ಪ್ರಕಾರ 6ರಿಂದ 14 ವರ್ಷದ ಎಲ್ಲಾ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣ ಪಡೆಯುವ ಹಕ್ಕು ಇದೆ. ಯಾವುದೇ ಮಗು ಅನಾವಶ್ಯಕವಾಗಿ ಶಾಲೆಯಿಂದ ಅಥವಾ ಶಿಕ್ಷಣದಿಂದ ವಂಚಿತರಾಗಬಾರದೆಂದು ಸಾರ್ವಜನಿಕ ಶಿಕ್ಷಣ ಇಲಾಖೆಯು ಶಾಲೆಯಿಂದ ಹೊರಗುಳಿದ ಹಾಗೂ ಯಾವುದೇ ಶಾಲೆಯಲ್ಲಿ ದಾಖಲಾತಿಯಾಗದೆ ಉಳಿದಿರುವ ಮಕ್ಕಳನ್ನು ಸಮೀಕ್ಷಾ ಕಾರ್ಯದ ಮೂಲಕ ಮುಖ್ಯವಾಹಿನಿಗೆ ಸೇರಿಸಿ ಅಂತಹ ಮಕ್ಕಳಿಗೆ ಶಿಕ್ಷಣವನ್ನು ಮುಂದುವರಿಸುವ ಕಾರ್ಯವೇ ಮಕ್ಕಳ ಸಮೀಕ್ಷಾ ಕಾರ್ಯವಾಗಿದೆ ಎಂದರು.

ಸರಕಾರಿ ಶಾಲೆಯಲ್ಲಿ ಮಕ್ಕಳಿಗೆ ಉಚಿತವಾಗಿ ಪಠ್ಯಪುಸ್ತಕ, ಸಮವಸ್ತ್ರ, ಮಧ್ಯಾಹ್ನದ ಬಿಸಿಯೂಟ, ಹಾಲು ಮುಂತಾದ ಸೌಲಭ್ಯಗಳನ್ನು ಒದಗಿಸುತ್ತಿದೆ.

ಪಾಲಕರು ಇದನ್ನರಿತು ತಮ್ಮ ಮಕ್ಕಳನ್ನು ಶಾಲೆಯಿಂದ ಹೊರಗುಳಿಯುದಂತೆ ಕ್ರಮವಹಿಸಬೇಕೆಂದು ಸಿಆರ್‌ಪಿ ರವಿ. ಎಂ.ಹೆಬ್ಬಳ್ಳಿ ಪಾಲಕರಿಗೆ ತಿಳಿಸಿದರು. ವಿ.ಟಿ. ದಾಸರ, ಮುಖ್ಯೋಪಾಧ್ಯಾಯ ಎಂ.ಟಿ. ಮೆಣಸಿನಕಾಯಿ, ಪ್ರಕಾಶ ದೊಡ್ಡಮನಿ ಹಾಗೂ ಎನ್.ಎಸ್. ಚಿಟ್ಟಿ ಅವರು ಅಂಬೇಡ್ಕರ್ ನಗರದ ಮನೆ ಮನೆಗೆ ತೆರಳಿ ಶಾಲೆ ಬಿಟ್ಟ ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳ ಸಮೀಕ್ಷೆ ಕಾರ್ಯವನ್ನು ನಡೆಸಿ, ಪಾಲಕರಿಂದ ಮಕ್ಕಳ ಮಾಹಿತಿ ಪಡೆದುಕೊಂಡು, ಪಾಲಕರಿಗೆ ಶಿಕ್ಷಣದ ಕುರಿತು ತಿಳಿಹೇಳಿದರು.

# ಕರಾಟೆಯಲ್ಲಿ ಸಾಧನೆ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಗೋಲ್ಡನ್ ಕರಾಟೆ ಸ್ಪೋರ್ಟ್ಸ್ ಅಸೋಸಿಯೇಷನ್‌ನ ಕರಾಟೆ ಪಟು ಅಬ್ದುಲ್ ಲಾಡಸಾಬನರ ಇತ್ತೀಚೆಗೆ ಮೈಸೂರು ಜಿಲ್ಲೆಯ ಹುಣಸೂರನಲ್ಲಿ ಜರುಗಿದ 2ನೇ ರಾಷ್ಟ್ರ ಮಟ್ಟದ ಮುಕ್ತ ಕರಾಟೆ ಪಂದ್ಯಾವಳಿಯಲ್ಲಿ ಭಾಗವಹಿಸಿ ಕರಾಟೆ ಕಟಾ ವಿಭಾಗದಲ್ಲಿ ದ್ವಿತೀಯ ಹಾಗೂ ಕುಮಿಟಿ ವಿಭಾಗದಲ್ಲಿ ತೃತೀಯ ಸ್ಥಾನ ಪಡೆಯುವ ಮೂಲಕ ಜಿಲ್ಲೆಗೆ ಕೀರ್ತಿ ತಂದಿದ್ದಾನೆ.



ವಿಜೇತ ವಿದ್ಯಾರ್ಥಿಗೆ ತರಬೇತುದಾರರಾದ ರಾಘವೇಂದ್ರ ಮುತ್ತಲಗೇರಿ, ಗಣೇಶ ಇಳಕಲ್ಲ ಅಭಿನಂದನೆ ಸಲ್ಲಿಸಿದ್ದಾರೆ.

## ನಿಧನ ವಾರ್ತೆ

# ರಮಾಕಾಂತ ಕೃಷ್ಣಾಜಿ ಕುಲಕರ್ಣಿ



**ಲಕ್ಷ್ಮೇಶ್ವರ:** ಪಟ್ಟಣದ ಬ್ರಾಹ್ಮಣ ಸಮಾಜ ಹಿರಿಯರು, ಯೂನಿಯನ್ ಬ್ಯಾಂಕ್ ನಿವೃತ್ತ ನೌಕರರಾಗಿದ್ದ ರಮಾಕಾಂತ ಕೃಷ್ಣಾಜಿ ಕುಲಕರ್ಣಿ (86) ಅವರು ಇತ್ತೀಚೆಗೆ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನಗಲಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ಮನವಿ

# ಬೆಳೆ ಸಮೀಕ್ಷೆ ಮೂಲಕ ರೈತರಿಗೆ ನ್ಯಾಯಯುತ ಪರಿಹಾರ ಒದಗಿಸಿ



**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಕೊಪ್ಪಳ ಜಿಲ್ಲೆಯ ರೈತರು ಸಹ ಫ್ರೂಟ್ಸ್ ಡೇಟಾಬೇಸ್‌ನಲ್ಲಿ ತಮ್ಮ ಸಂಪೂರ್ಣ ಜಮೀನಿನ ವಿಸ್ತೀರ್ಣದ ವಿವರವನ್ನು ಕೂಡಲೇ ದಾಖಲಿಸಬೇಕು ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಜಿಲ್ಲೆಯ ರೈತರಲ್ಲಿ ಮನವಿ ಮಾಡಿದರು.

ನವೆಂಬರ್ 7ರಂದು ಕಂದಾಯ ಇಲಾಖೆಯ ಪ್ರಗತಿ ಪರಿಶೀಲನೆಯ ಬಳಿಕ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು.

ರಾಜ್ಯವು ಈ ವರ್ಷ ಹಿಂದೆಂದೂ ಕಾಣದ ಬರಕ್ಕೆ ತುತ್ತಾಗಿದೆ. ಮಳೆ ಇಲ್ಲದ ಕಾರಣ ರೈತರು ಪರಿತಪಿಸುವಂತಾಗಿದೆ. ಬೆಳೆ ಕೈಸೇರದೆ ಸಂಕಷ್ಟಕ್ಕೀಡಾಗಿದ್ದಾರೆ. ಇಂತಹ ಸಂದರ್ಭದಲ್ಲಿ ನಾವು ರೈತರ ಪರ ನಿಲ್ಲಬೇಕಾಗಿದೆ. ರೈತರಿಗೆ ನ್ಯಾಯಯುತ ಪರಿಹಾರ ತಲುಪಿಸಲು ಬೆಳೆ ಸಮೀಕ್ಷೆ ಅಗತ್ಯವಾಗಿದೆ. ಬೆಳೆ ಪರಿಹಾರವು ಆನ್‌ಲೈನ್ ಮೂಲಕವೇ ರೈತರಿಗೆ ತಲುಪಲಿದೆ. ಮಾಹಿತಿ ಬಿಟ್ಟುಹೋದರೆ ಅಂತವರಿಗೆ ಪರಿಹಾರ ನೀಡಲು ಬರುವುದಿಲ್ಲ. ಹೀಗಾಗಿ ಎಲ್ಲಾ ರೈತರ ಬೆಳೆ ಸಮೀಕ್ಷೆ ನಡೆಸಿ ಅವರಿಗೆ ನ್ಯಾಯಯುತ ಪರಿಹಾರ ತಲುಪಿಸುವ ಕಾರ್ಯ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಕಂದಾಯ ಇಲಾಖೆಗೆ ಸೇರದ ಕಾರಣ ಕಂದಾಯೇತರ ಜನವಸತಿ ನಿವಾಸಿಗಳು ಅಭಿವೃದ್ಧಿ ಯೋಜನೆಗಳಿಂದ ವಂಚಿತರಾಗುತ್ತಿದ್ದರು. ಹೀಗಾಗಿ ಕರ್ನಾಟಕ ಭೂ ಕಂದಾಯ ಕಾಯಿದೆಗೆ ತಿದ್ದುಪಡಿ ತಂದು ತಾಂಡಾ–ಗೊಲ್ಲರಹಟ್ಟಿ ಸೇರಿದಂತೆ ಇತರ ಪ್ರದೇಶಗಳನ್ನು ಕಂದಾಯ ಗ್ರಾಮ ಎಂದು ಘೋಷಿಸಲು ಅನುವು ಮಾಡಿಕೊಡಲಾಗಿತ್ತು. ಕಂದಾಯ ಗ್ರಾಮ ಘೋಷಿಸುವ ಕಾರ್ಯ ಕೊಪ್ಪಳ ಜಿಲ್ಲೆಯಲ್ಲಿ ಸಮರ್ಪಕವಾಗಿ ಆಗಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಕೃಷಿಯೇತರ ಚಟುವಟಿಕೆಗಳಲ್ಲಿ ತೊಡಗಿರುವವರಿಗು ಸಹ ಸಾಗುವಳಿ ಚೀಟಿ ನೀಡುವುದು ಅಸಾಧ್ಯ. ಸಾವಿರಾರು ಎಕರೆ ಸರ್ಕಾರಿ ಭೂಮಿ ಅಕ್ರಮ ಸಾಗುವಳಿದಾರರ ಪಾಲಾಗಿದ್ದು, ಪ್ರತಿಯೊಂದು ಭಾಗಕ್ಕೂ ಅಧಿಕಾರಿಗಳೇ ನೇರ ಹೋಗಿ ಕೃಷಿ ನಡೆಯುತ್ತಿದೆಯೇ ಎಂದು ಪರಿಶೀಲಿಸುವುದು ಸಾಧ್ಯವಿಲ್ಲ. ಹೀಗಾಗಿ ಬಗರ್ ಹುಕುಂ ತಂತ್ರಾಂಶದ ಮೂಲಕ ಅಕ್ರಮ ಸಾಗುವಳಿ ಭೂಮಿಯಲ್ಲಿ ಕೃಷಿ ಅಥವಾ ಇನ್ನಾವುದೇ ಚಟುವಟಿಕೆ ಬಗ್ಗೆ ಸ್ಯಾಟ್‌ಲೈಟ್ ಇಮೇಜ್ ಮೂಲಕ ಮಾಹಿತಿ ಪಡೆದು ಅರ್ಜಿ ವಿಲೇವಾರಿ ಮಾಡುವುದು ನ್ಯಾಯಸಮ್ಮತವಾಗಲಿದೆ. ಅಧಿಕಾರಿಗಳು ಆ್ಯಪ್ ಸಹಾಯದೊಂದಿಗೆ ತ್ವರಿತಗತಿಯಲ್ಲಿ ಬಹರ್ ಹುಕುಂ ಅರ್ಜಿ ವಿಲೇವಾರಿಗೊಳಿಸಬಹುದು ಎಂದು ತಿಳಿಸಲಾಗಿದೆ ಎಂದು ಸಚಿವರು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರಕುಮಾರ ಕಟಾರಿಯಾ, ಕಂದಾಯ ಇಲಾಖೆಯ ಆಯುಕ್ತರಾದ ಪಿ.ಸುನೀಲ್‌ಕುಮಾರ, ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಸೇರಿದಂತೆ ಇತರರು ಇದ್ದರು.

> ಕೊಪ್ಪಳ ಜಿಲ್ಲೆಯಲ್ಲಿ ಶೇ.98ರಷ್ಟು ರೈತರ ಅಕೌಂಟ್ ಸಿದ್ಧವಾಗಿದೆ. ಆದರೆ ಫ್ರೂಟ್ಸ್ ಡೇಟಾಬೇಸನಲ್ಲಿ ರೈತರ ಜಮೀನಿನ ವಿಸ್ತೀರ್ಣವು ಶೇ.65ರಷ್ಟು ಮಾತ್ರ ದಾಖಲಾಗಿದೆ. ರೈತರಿಗೆ ಪರಿಹಾರ ಪಾವತಿ ಮಾಡಲು ರೈತರ ಜಮೀನಿನ ಸಂಪೂರ್ಣ ಮಾಹಿತಿ ಅಗತ್ಯವಿದೆ. ಆದ್ದರಿಂದ ಬಾಕಿ ಇರುವ ಶೇ.35ರಷ್ಟು ವಿಸ್ತೀರ್ಣವನ್ನು ಸೇರಿಸುವ ಕಾರ್ಯಕ್ಕೆ ಜಿಲ್ಲೆಯ ರೈತರು ಅಧಿಕಾರಿಗಳೊಂದಿಗೆ ಸಹಕರಿಸಬೇಕು.
>
> **– ಕೃಷ್ಣ ಭೈರೇಗೌಡ.**
> ಕಂದಾಯ ಸಚಿವರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka